

MAG(2)PRB/CR/165/2022-23 Title code: KARKAN27951

# ಮುಂಜಾನೆ ವಾರ್ತೆ

ಇ–ಪೇಪರ್: www.munjanevarthe.com

EDITOR: H.L.AMARANATH

MUNJANE VARTHE

ಸಂಪಾದಕ: ಹೆಚ್.ಎಲ್ ಅಮರನಾಥ್ ಕನ್ನಡ ದಿನಪತ್ರಿಕೆ

VOLUME : 2 ISSUE: 132 ಸಂಪುಟ: 02 ಸಂಚಿಕೆ: 132 ಪುಟಗಳು: 04 munjanevarthe 26 WEDNESDAY JUNE 2024 26 ಬುಧವಾರ ಜೂನ್ 2024 ₹ 2



ಜಾಹೀರಾತಿಗಾಗಿ ಸಂಪರ್ಕಿಸಿ

9663122276

www.munjanevarthe.com


ಸರ್ಕಾರಿ ಶಾಲೆಗೆ ಸಿ.ಟಿ.ಶಂಕರ್ ಅವರಿಂದ ಶಾಲಾ ವಾಹನ ಕೊಡುಗೆ

ವಿವರಪುಟ 02

ಯುವ ಪೀಳಿಗೆಗೆ ಮಾದರಿಯಾಗಬೇಕು ಎಂದು ಸಮಾಜ ಸೇವಕ ಆರ್‌ಟಿಓ ಮಲ್ಲಿಕಾರ್ಜುನ್

ವಿವರಪುಟ 03

ಉಚಿತ ಯಕ್ಷಗಾನ ತರಬೇತಿ ಕಾರ್ಯಗಾರ ಉದ್ಘಾಟನೆ.....!

ವಿವರಪುಟ 04

# ವಿಶೇಷ ಕಾಯ್ದೆ ಜಾರಿಗೆಗೆ ಸಿಎಂ ಸಿದ್ದರಾಮಯ್ಯ ಘೋಷಣೆ

ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ನಡೆದ ಸಂಚಾರಿ ಕುರಿಗಾಹಿ ಸಮುದಾಯಗಳ ಮುಖಂಡರ ಜೊತೆಗಿನ ಸಭೆಯ ಬಳಿಕ ನಾನು ನೀಡಿದ ಪ್ರಮುಖ ಸೂಚನೆ ಹಾಗೂ ಮಾಹಿತಿಗಳಿವು:

ಕುರಿಗಾಹಿಗಳ ರಕ್ಷಣೆಗೆ ನಮ್ಮ ಸರ್ಕಾರ ಬದ್ಧವಾಗಿದೆ. ಕುರಿಗಳ ಕಳ್ಳತನ ತಡೆಯಲು ಅಗತ್ಯವಿದ್ದರಿಗೆ ಬಂದೂಕಿನ ಲೈಸೆನ್ಸ್ ಕೊಡಿಸಲು ಸೂಚಿಸಲಾಗುವುದು.

ಕುರಿ ಕಳ್ಳತನ ಪ್ರಕರಣಗಳ ಕುರಿತು ಯಾವುದೇ ಠಾಣೆಗೆ ದೂರು ಬಂದ ಕೂಡಲೇ ಪ್ರಕರಣ ದಾಖಲಿಸಿ ಕ್ರಮ ಕೈಗೊಳ್ಳಬೇಕು ಎಂಬ ಸೂಚನೆ ನೀಡಲಾಯಿತು.

ರಾಜ್ಯದಲ್ಲಿನ ವಲಸೆ ಕುರಿಗಾರರ ಮತ್ತು ಅವರ ಸ್ವತ್ತುಗಳ ಮೇಲಿನ ದೌರ್ಜನ್ಯ ತಡೆಯುವ ಕಾಯ್ದೆ ರೂಪಿಸಲಾಗುವುದು.

ಕುರಿಗಾಹಿಗಳಿಗೆ ಗುರುತಿನ



ಚೀಟಿ ವಿತರಣೆ ನೀಡಲು ವ್ಯವಸ್ಥೆ ಮಾಡಲಾಗುವುದು. ಈ ಗುರುತಿನ ಚೀಟಿ ಆಧಾರದ ಮೇಲೆ ಆಸ್ಪತ್ರೆಗಳಲ್ಲಿ ಉಚಿತ ಚಿಕಿತ್ಸೆ ನೀಡುವಂತೆ ಕ್ರಮ ಕೈಗೊಳ್ಳಲಾಗುವುದು.

ಕುರಿಗಾಹಿಗಳ ಮಕ್ಕಳಿಗೆ ಸರ್ಕಾರಿ ವಸತಿ ಶಾಲೆಗಳಲ್ಲಿ ಆದ್ಯತೆ ಮೇರೆಗೆ ಪ್ರವೇಶ ನೀಡುವ ಬಗ್ಗೆ ಬಜೆಟ್ ನಲ್ಲಿ ಘೋಷಣೆ ಮಾಡಿದ್ದು ಇವುಗಳಿಗೆ ಸರ್ಕಾರಿ ಆದೇಶ ನೀಡುವಂತೆ ಸೂಚಿಸಲಾಯಿತು.

ಪಶುಸಂಗೋಪನಾ ಇಲಾಖೆಯಲ್ಲಿ 1300 ವೈದ್ಯರ ಹುದ್ದೆ ಖಾಲಿ ಇದ್ದು, ಪ್ರಸ್ತುತ 400 ವೈದ್ಯರನ್ನು ನೇಮಕ ಮಾಡಲಾಗುತ್ತಿದೆ. ಮುಂದಿನ ವರ್ಷ ಬಾಕಿ ವೈದ್ಯರ ನೇಮಕಾತಿ ಮಾಡಲಾಗುವುದು.

ಕುರಿಗಾರರು ಕ್ಯಾಂಪ್ ಮಾಡಿರುವ ಕಡೆಗಳಲ್ಲೇ ವೈದ್ಯರು ಬಂದು ಚಿಕಿತ್ಸೆ ನೀಡಬೇಕು ಎಂದು ಸೂಚಿಸಲಾಗುವುದು.

ಪುಟ 2ಕ್ಕೆ

## ಸಿದ್ದರಾಮಯ್ಯ ಭೇಟಿ ಮಾಡಿದ ರೇಣುಕಾಸ್ವಾಮಿ ತಂದೆ–ತಾಯಿ



ಬೆಂಗಳೂರು: ಚಿತ್ರದುರ್ಗದ ರೇಣುಕಾಸ್ವಾಮಿ ಬರ್ಬರವಾಗಿ ಕೊಲೆಯಾಗಿದ್ದು, ಈ ಪ್ರಕರಣ ಕುರಿತು ಪವಿತ್ರ ಗೌಡ, ನಟ ದರ್ಶನ್ ಸೇರಿದಂತೆ 17 ಮಂದಿ ಆರೋಪಿಗಳು ಜೈಲುವಶವಾಗಿದ್ದಾರೆ. ಆದರೆ ಕುಟುಂಬದ ಆಧಾರವಾಗಿದ್ದ

ಪುಟ 2ಕ್ಕೆ

## ಜನರ ಋಣ ತೀರಿಸುವೆ ಎಂದ ಡಿಸಿಎಂ ಡಿ.ಕೆ.ಶಿವಕುಮಾರ್!

ಕರ್ನಾಟಕದಲ್ಲಿ ಚುನಾವಣೆ ಅಬ್ಬರ ಸದ್ಯಕ್ಕೆ ಮುಗಿದಿಲ್ಲ, ಯಾಕಂದ್ರೆ ಇದೀಗ ಉಪಚುನಾವಣೆ ಅಖಾಡ ರಂಗೇರುತ್ತಿದೆ. ಹೇಗೆ ಅಂದ್ರೆ ಲೋಕಸಭೆ ಚುನಾವಣೆಗೆ ಸ್ಪರ್ಧೆ ಮಾಡೋದಕ್ಕೆ, ತಮ್ಮ ಶಾಸಕ ಸ್ಥಾನ ಬಿಟ್ಟುಕೊಟ್ಟ ನಾಯಕರ ಸ್ಥಾನಗಳಿಗೆ ಈಗ ಚುನಾವಣೆ ನಡೆಯಲಿದೆ. ಈ ಪೈಕಿ ಚನ್ನಪಟ್ಟಣ ವಿಧಾನಸಭಾ ಕ್ಷೇತ್ರವು ಭರ್ಜರಿ ರಂಗ ಪಡೆದಿದೆ. ಅದರಲ್ಲೂ ಡಿಸಿಎಂ ಡಿ.ಕೆ. ಶಿವಕುಮಾರ್ ಇಲ್ಲಿಂದ ಅಖಾಡ ಪ್ರವೇಶ ಮಾಡುತ್ತಾರೆ ಎಂಬ ಸುದ್ದಿಗಳ ನಡುವೆ ಮಹತ್ವದ ಹೇಳಿಕೆ ಹೊರಬಿದ್ದಿದೆ. ಅಂದಹಾಗೆ ಚನ್ನಪಟ್ಟಣ ಕ್ಷೇತ್ರದಿಂದ ವಿಧಾನಸಭೆ ಉಪಚುನಾವಣೆಗೆ, ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಸ್ಪರ್ಧೆ ಮಾಡಲಿದ್ದಾರೆ ಎನ್ನಲಾಗಿದೆ. ಹೀಗಿದ್ದಾಗ ಚನ್ನಪಟ್ಟಣ ಕ್ಷೇತ್ರ ವ್ಯಾಪ್ತಿಯಲ್ಲಿ ಅವರು ಫುಲ್ ಆಕ್ಟಿವ್ ಆಗಿದ್ದು, ಚನ್ನಪಟ್ಟಣ ಅಭಿವೃದ್ಧಿ ಕುರಿತು ಈಗ ಮಹತ್ವದ ಹೇಳಿಕೆ ನೀಡಿದ್ದಾರೆ. ಯಾರು ಏನೇ ಟೀಕೆ ಮಾಡಲಿ. ನಾನು ಚನ್ನಪಟ್ಟಣ ಕ್ಷೇತ್ರದ ಜನರ ಋಣ ತೀರಿಸುತ್ತೇನೆ ಎಂದಿರುವ ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಈ ಹಿಂದೆ ನಾನು ಇಲ್ಲಿ ಶಾಸಕನಾಗಿದ್ದಾಗಲೂ ಅಧಿಕಾರಿಗಳನ್ನು ಹಳ್ಳಿಗಳಿಗೆ ಕರೆದುಕೊಂಡು ಹೋಗಿ ಜನರ ಸಮಸ್ಯೆ ಆಲಿಸಿ ಪರಿಹಾರ ನೀಡುವ ಕೆಲಸ ಮಾಡಿದ್ದೆ. ಈಗಲೂ ಅದೇ ಕೆಲಸ ಮುಂದುವರಿಸುವೆ ಎಂದಿದ್ದಾರೆ ಡಿಸಿಎಂ.

ಸೈಟ್ ಹಂಚಿಕೆ ಬಗ್ಗೆ ಮಾಹಿತಿ

ಪುಟ 2ಕ್ಕೆ



## ಅನುದಾನ ಸಕಾಲದಲ್ಲಿ ಬಳಸದಿದ್ದರೆ ಅಧಿಕಾರಿಯೇ ಹೊಣೆ..



ಅನುದಾನ ಸಕಾಲದಲ್ಲಿ ಬಳಸದಿದ್ದರೆ ಅಧಿಕಾರಿಯೇ ಹೊಣೆ ಎಂದು ಕೆಡಿಪಿ ಪ್ರಗತಿ ಪರಿಶೀಲನಾ ಸಭೆಯಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ ಲಾಡ್ ಎಚ್ಚರಿಕೆ ನೀಡಿದ್ದಾರೆ.

ಪುಟ 2ಕ್ಕೆ

## ಮೂರು ಲಕ್ಷ ನೀರಿನ ಮಾದರಿ ಸಂಗ್ರಹ



ಗ್ರಾಮೀಣ ಪ್ರದೇಶಗಳ ವ್ಯಾಪ್ತಿಯಲ್ಲಿ ಕುಡಿಯುವ ನೀರು ಸರಬರಾಜು ಕಲುಷಿತಗೊಳ್ಳದಂತೆ ಎಚ್ಚರಿಕೆ ನೀಡಲಾಗಿದ್ದು ಈ ಹಿನ್ನೆಲೆಯಲ್ಲಿ ಗ್ರಾಮೀಣ ನೀರು ಸರಬರಾಜು ಅಧಿಕಾರಿಗಳು ಹಾಗೂ ಎಂಜನಿಯರುಗಳು ಈ ತಿಂಗಳ 14ರಿಂದ 21ರವರೆಗಿನ ವಾರದಲ್ಲಿ ರಾಜ್ಯದ ಗ್ರಾಮೀಣ ಭಾಗಗಳಲ್ಲಿ ಮೂರು ಲಕ್ಷ ನೀರಿನ ಮಾದರಿಗಳನ್ನು ಸಂಗ್ರಹಿಸಿ ಪರೀಕ್ಷೆಗಾಗಿ ಪ್ರಯೋಗಾಲಯಕ್ಕೆ ಕಳುಹಿಸಿಕೊಟ್ಟಿದ್ದಾರೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ.

ಕೋಲಾರ ಜಿಲ್ಲೆಯ ಮುಳಬಾಗಿಲು ಬಳಿಯ ಮುಣಜೇನಹಳ್ಳಿ ಹಾಗೂ ಬೆಳಗಾವಿ ಜಿಲ್ಲೆಯ ಗೋಕಾಕ್ ಬಳಿಯ ಕನಸಗೇರಿ ಗ್ರಾಮದಲ್ಲಿ ಈಚೆಗೆ ಕುಡಿಯುವ ನೀರು ಕಲುಷಿತಗೊಂಡ ಹಿನ್ನೆಲೆಯಲ್ಲಿ ಗ್ರಾಮಗಳಲ್ಲಿ ಪರ್ಯಾಯ

ಪುಟ 2ಕ್ಕೆ

## 87ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನಕ್ಕೆ ಮುಹೂರ್ತ ಫಿಕ್ಸ್

ಸಭೆಯಲ್ಲಿ ಮಂಡ್ಯದಲ್ಲಿ ನಡೆಯಲಿರುವ 87ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನವನ್ನು ಡಿಸೆಂಬರ್ 20 ರಿಂದ ಮೂರು ದಿನಗಳವರೆಗೆ ನಡೆಸಲು ನಿರ್ಧರಿಸಲಾಗಿದೆ.

ಬೆಂಗಳೂರು : ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನಕ್ಕೆ ಮುಹೂರ್ತ ಫಿಕ್ಸ್ ಆಗಿದ್ದು, ಡಿಸೆಂಬ್ 20 ರಿಂದ ಮೂರು ದಿನ ಕನ್ನಡ ಸಾಹಿತ್ಯ ಸಮ್ಮೇಳನ ನಡೆಯಲಿದೆ.

ಗೃಹ ಕಚೇರಿ ಕೃಷ್ಣಾದಲ್ಲಿ ಸಿಎಂ ಅಧ್ಯಕ್ಷತೆಯಲಿ ಸಾಹಿತ್ಯ ಸಮ್ಮೇಳನದ ಪೂರ್ವಭಾವಿ ಸಭೆ ನಡೆದಿದ್ದು, ಸಭೆಯಲ್ಲಿ ಮಂಡ್ಯದಲ್ಲಿ ನಡೆಯಲಿರುವ 87 ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನವನ್ನು ಡಿಸೆಂಬರ್ 20 ರಿಂದ ಮೂರು ದಿನಗಳವರೆಗೆ ನಡೆಸಲು ನಿರ್ಧರಿಸಲಾಗಿದೆ.

## ಸೂರಜ್ ರೇವಣ್ಣ ಆಪ್ತನಿಂದಲೇ ಗಂಭೀರ ಆರೋಪ

ಜೆಡಿಎಸ್ ಕಾರ್ಯಕರ್ತನ ಮೇಲೆ ದೌರ್ಜನ್ಯ ಎಸಗಿದ ಪ್ರಕರಣದಲ್ಲಿ ಸಿಐಡಿ ವಶದಲ್ಲಿರುವ ಜೆಡಿಎಸ್ ಎಂಎಲ್‌ಸಿ ಡಾ. ಸೂರಜ್ ರೇವಣ್ಣಗೆ ಮತ್ತೊಂದು ಸಂಕಷ್ಟ ಎದುರಾಗಿದೆ. ಸೂರಜ್ ರೇವಣ್ಣ ವಿರುದ್ಧ ಎರಡನೇ ಪ್ರಕರಣ ದಾಖಲಾಗಿದೆ. ಹಣಕ್ಕಾಗಿ ಬೇಡಿಕೆ ಇಟ್ಟಿದ್ದ, ಹಣ ಕೊಡದ ಕಾರಣ ಸೂರಜ್ ರೇವಣ್ಣ ವಿರುದ್ಧ ಸಂತ್ರಸ್ತ ಸುಳ್ಳು ಆರೋಪ ಮಾಡುತ್ತಿದ್ದಾನೆ ಎಂದು ಶಿವಕುಮಾರ್ ದೂರು ಕೊಟ್ಟಿದ್ದರು. ಈಗ ಅದೇ ಶಿವಕುಮಾರ್ ಸೂರಜ್ ರೇವಣ್ಣ ವಿರುದ್ಧವೇ ದೂರು ಕೊಟ್ಟಿದ್ದು, ಪ್ರಕರಣ ಮತ್ತೊಂದು ತಿರುವು ಪಡೆದಿದೆ.



ಶಿವಕುಮಾರ್ ಆರೋಪಗಳೇನು? : ಸೂರಜ್ ರೇವಣ್ಣ ನನ್ನನ್ನು ಬೆದರಿಸಿ ಸಂತ್ರಸ್ತನ ವಿರುದ್ಧ ದೂರು ಕೊಡಿಸಲಾಗಿತ್ತು ಎಂದು ಶಿವಕುಮಾರ್ ಆರೋಪಿಸಿದ್ದಾರೆ. ಅಲ್ಲದೆ ಸೂರಜ್ ರೇವಣ್ಣ ನನ್ನ ಮೇಲೂ ಲೈಂಗಿಕ ದೌರ್ಜನ್ಯ ಎಸಗಿದ್ದರು ಎಂದು ಮತ್ತೊಂದು ಗಂಭೀರ ಆರೋಪ ಮಾಡಿದ್ದಾರೆ. ಶಿವಕುಮಾರ್ ಹೇಳಿಕೆಗಳನ್ನು ಪೊಲೀಸರು ದಾಖಲಿಸಿಕೊಂಡಿದ್ದು, ಸೂರಜ್ ರೇವಣ್ಣಗೆ ಮತ್ತೊಂದು ಸಂಕಷ್ಟ ಎದುರಾಗಲಿದೆ.

## ಸರ್ಕಾರಿ ನೌಕರರ ವರ್ಗಾವಣೆಗೆ ಪರಿಷ್ಕೃತ ಮಾರ್ಗಸೂಚಿ ಪ್ರಕಟ

ಬೆಂಗಳೂರು: ಸರ್ಕಾರಿ ನೌಕರರ ವರ್ಗಾವಣೆಗೆ ಸಂಬಂಧಿಸಿ ರಾಜ್ಯ ಸರ್ಕಾರ ಮಹತ್ವದ ಆದೇಶ ಹೊರಡಿಸಿದೆ. ಆಡಳಿತದಲ್ಲಿನ ನೂತನ ಬೆಳವಣಿಗೆಗಳ ಹಿನ್ನೆಲೆಯಲ್ಲಿ ವರ್ಗಾವಣಾ ಮಾರ್ಗಸೂಚಿಗಳನ್ನು ವ್ಯಾಪಕವಾಗಿ ಪುನರಾವಲೋಕನ ಮಾಡಿ, ವರ್ಗಾವಣಾ ಮಾರ್ಗಸೂಚಿಗಳನ್ನು ಪರಿಷ್ಕರಿಸಿ, ಹೊಸದಾದ ವರ್ಗಾವಣಾ ಮಾರ್ಗಸೂಚಿಯನ್ನು ಪ್ರಕಟಿಸಿದೆ.

ವರ್ಗಾವಣೆ ಸಂಖ್ಯೆಯು ಒಂದು ಜ್ಯೇಷ್ಠತಾ ಘಟಕದಲ್ಲಿ ಕಾರ್ಯನಿರತ ವೃಂದ ಬಲದ ಶೇ. 6ನ್ನು ಮೀರದಂತೆ ಜೂನ್ 25ರಿಂದ ಜುಲೈ 9ರವರೆಗೆ ಸಾರ್ವತ್ರಿಕ ವರ್ಗಾವಣೆ

ಪುಟ 2ಕ್ಕೆ

# ಚನ್ನಪಟ್ಟಣದಲ್ಲಿ ಪ್ರತಿಷ್ಠೆಯ ಪಣ

ರಾಮನಗರ: ಚನ್ನಪಟ್ಟಣ ವಿಧಾನಸಭಾ ಕ್ಷೇತ್ರದ ಉಪ ಚುನಾವಣೆ ರಾಜ್ಯದ ಗಮನ ಸೆಳೆಯುತ್ತಿದೆ. ಬಿಜೆಪಿ ಜೆಡಿಎಸ್ ಮೈತ್ರಿ ಅಭ್ಯರ್ಥಿ ಯಾರಾಗಲಿದ್ದಾರೆ ಎಂಬುದರ ಬಗ್ಗೆ ಭಾರೀ ಕುತೂಹಲ ಮೂಡಿಸಿದೆ. ಈ ನಡುವೆ ಬಿಜೆಪಿ ಹಾಗೂ ಜೆಡಿಎಸ್ ಮೈತ್ರಿಯು ಕ್ಷೇತ್ರದಲ್ಲಿ ಪಕ್ಷದ ಚಿಹ್ನೆ ವಿನಿಮಯ



ಮಾಡುವ ಹೊಸ ತಂತ್ರಗಾರಿಕೆ ಹೆಣೆದಿದೆ. ಇದರಿಂದಾಗಿ ಈ ಕ್ಷೇತ್ರಕ್ಕೆ ಜೆಡಿಎಸ್ ಪಕ್ಷದ ಚಿಹ್ನೆ ದೊರೆಯುತ್ತಿರುವುದು ಬಹುತೇಕ ಫಿಕ್ಸ್ ಎಂದು ರಾಜಕೀಯ ವಲಯದಲ್ಲಿ ವಿಶ್ಲೇಷಿಸಲಾಗುತ್ತಿದೆ.

ಕೈ, ಕಮಲ ಪಕ್ಷಕ್ಕೆ ಪ್ರತಿಷ್ಠೆಯ ಉಪ ಚುನಾವಣೆ: ಲೋಕಸಭೆ ಚುನಾವಣೆ ಮುಗಿಯುತ್ತಿದ್ದಂತೆ ಈಗ ರಾಜ್ಯದ ಜನರ ಕಣ್ಣು ಉಪ ಚುನಾವಣೆಯ ಮೇಲೆ ನೆಟ್ಟಿದೆ. ಶಾಸಕರು ಸಂಸದರಾಗಿ ಆಯ್ಕೆಯಾದ ಹಿನ್ನೆಲೆಯಲ್ಲಿ ಕರ್ನಾಟಕದ ಮೂರು ವಿಧಾನಸಭಾ ಕ್ಷೇತ್ರಗಳಿಗೆ ಉಪ ಚುನಾವಣೆ ನಡೆಯಲಿದೆ. ಹಾವೇರಿಯ ಶಿಗ್ಗಾಂವಿ, ರಾಮನಗರದ ಚನ್ನಪಟ್ಟಣ,

ಪುಟ 2ಕ್ಕೆ


ಜಗತ್ತಿನ ಯಾವುದೇ ಮೂಲೆಯಲ್ಲಿ ಕುಳಿತು ಮುಂಜಾನೆವಾರ್ತೆ ಓದಿ...

www.munjanevarthe.com

ಮುಂಜಾನೆ ವಾರ್ತೆ ಕನ್ನಡ ದಿನಪತ್ರಿಕೆ ಓದುಗುವುದು ಈಗ ಮತ್ತಷ್ಟು ಸುಲಭ

ಮುಂಜಾನೆ ವಾರ್ತೆ
ಕನ್ನಡ ದಿನಪತ್ರಿಕೆ
ಇ-ಪೇಪರ್: www.munjanevarth.com
ಬುಧವಾರ 26 ಜೂನ್ 2024
WEDNESDAY 26 June 2024

# ಇಬ್ಬರೂ ಪುತ್ರರಿಗೆ ಬಟ್ಟೆ–ಊಟ ಕೊಟ್ಟ ಹೋದ ಹೆಚ್.ಡಿ.ರೇವಣ್ಣ

ಬೆಂಗಳೂರು : ಅಶ್ಲೀಲ ವಿಡಿಯೋ, ಅತ್ಯಾಚಾರ ಕೇಸ್ ನ ಆರೋಪಿ ಹಾಸನದ ಮಾಜಿ ಸಂಸದ ಪ್ರಜ್ವಲ್ ರೇವಣ್ಣ ಹಾಗೂ ಅಸಹಜ ಲೈಂಗಿಕ ದೌರ್ಜನ್ಯ ಆರೋಪಗಳನ್ನು ಪ್ರಜ್ವಲ್?? ಅಣ್ಣ ಸೂರಜ್ ರೇವಣ್ಣ ಎದುರಿಸುತ್ತಿದ್ದಾರೆ.

ಸದ್ಯ ಎಸ್‌ಐಟಿ ಕಸ್ಟಡಿಯಲ್ಲಿರುವ ಪ್ರಜ್ವಲ್ ರೇವಣ್ಣಗೆ ಅವರ ತಂದೆ ಮಾಜಿ ಸಚಿವ ಹೆಚ್.ಡಿ.ರೇವಣ್ಣ ಅವರು ತಮ್ಮ ಮನೆಯ ಊಟವನ್ನು ಹಾಗೂ ಕೆಲ ಬಟ್ಟೆಗಳನ್ನು ಕೊಟ್ಟು ತೆರಳಿದ್ದಾರೆ.

ಗ್ಯಾಸ್ಟ್ರಿಕ್ ಸಮಸ್ಯೆಗೆ ಒಳಗಾಗಿರುವ ಪ್ರಜ್ವಲ್ ರೇವಣ್ಣಗೆ ಮನೆಯ ಊಟ ನೀಡುವಂತೆ



ಅವರ ಪರ ವಕೀಲರು ಮಾಡಿರುವ ಮನವಿ ಮೇರೆಗೆ, ಕೋರ್ಟ್ ಅನುಮತಿ ನೀಡಿದೆ. ಈ ಹಿನ್ನೆಲೆಯಲ್ಲಿ ಎಸ್‌ಐಟಿ ಕಚೇರಿಗೆ ಬಂದು ಬಟ್ಟೆ–ಊಟವನ್ನು ರೇವಣ್ಣ ನೀಡಿ ಹೋಗಿದ್ದಾರೆ. ಇನ್ನು ಹೆಚ್.ಡಿ.ರೇವಣ್ಣ ಅವರ ಹಿರಿಯ ಮಗ ಸೂರಜ್ ರೇವಣ್ಣ ಸದ್ಯ ಸಿಐಡಿ ಕಸ್ಟಡಿಯಲ್ಲಿದ್ದು, ಅವರಿಗೂ ಬಟ್ಟೆಗಳನ್ನು ನೀಡಿ ತಂದೆ ತೆರಳಿದ್ದಾರೆ ಎಂದು ತಿಳಿದುಬಂದಿದೆ. ಬಟ್ಟೆ–ಊಟದ ಬ್ಯಾಗ್ ಅನ್ನು ಸಿಐಡಿ ಕಚೇರಿ ಗೇಟ್ ಬಳಿ ಸಿಬ್ಬಂದಿಗೆ ನೀಡಿದ ರೇವಣ್ಣ, ಗೇಟ್‌ನಿಂದಲೇ ವಾಪಸ್ ಹೊರಟು ಹೋಗಿದ್ದಾರೆ.

## ಜನರ ಋಣ ತೀರಿಸುವೆ ಎಂದ ಡಿಸಿಎಂ ಡಿ.ಕೆ.ಶಿವಕುಮಾರ್!

ಪುಟ 1ರಿಂದ

ಕಳೆದ ಐದು ವರ್ಷಗಳಲ್ಲಿ ತಾಲೂಕಿನ ಬಡವರಿಗೆ ಒಂದೇ ಒಂದು ನಿವೇಶನ ಹಂಚಿಕೆ ಮಾಡಿಲ್ಲ. ಯಾರೊಬ್ಬರಿಗೂ, ಬಗರ್ ಹುಕಂ ಸಾಗುವಳಿ ಜಮೀನು ನೀಡಿಲ್ಲ. ಆಶ್ರಯ ಸಮಿತಿ ಸಭೆ ಕೂಡ ಮಾಡಿಲ್ಲ ಎಂಬ ವಿಚಾರ ತಿಳಿಯಿತು. ಈ ಹಿಂದೆ ಇದ್ದವರು ಯಾಕೆ ಮಾಡಲಿಲ್ಲ ಎಂದು ಇದೀಗ ನಾನು ಪ್ರಶ್ನೆ ಮಾಡುವುದಿಲ್ಲ. ಯಾರಿಗೆ ನಿವೇಶನವಿಲ್ಲ ಆಯಾ ಊರಲ್ಲಿ ಸರ್ಕಾರವೇ 2 ರಿಂದ 3 ಎಕರೆ ಜಮೀನು ಖರೀದಿಸಿ ಲೇಔಟ್ ಮಾಡಿ ಬಡವರಿಗೆ ನಿವೇಶನ ಹಂಚಿಕೆ ಮಾಡಲಿದೆ ಎಂದು, ಇದೇ ವೇಳೆ ಭರವಸೆ ನೀಡಿದ್ದಾರೆ ಡಿಸಿಎಂ ಡಿ.ಕೆ. ಶಿವಕುಮಾರ್.

50 ಕೋಟಿ ರೂಪಾಯಿ ತರುತ್ತೇವೆ!

ಮತ್ತೊಂದು ಕಡೆ ಚನ್ನಪಟ್ಟಣದ ಬಡವರಿಗೆ ನಿವೇಶನ ನೀಡಲು 50 ಕೋಟಿ ರೂ. ಹಣ ತಂದು 50 ರಿಂದ 100 ಎಕರೆ ಜಾಗದಲ್ಲಿ ಲೇಔಟ್ ಮಾಡ್ತೀವಿ. ಬಡವರಿಗೆ ಮನೆ ಕಟ್ಟಿಕೊಡಲಾಗುವುದು. ಮುಂದೆ ಇಲ್ಲಿ ನಮ್ಮ ಶಾಸಕರು ಆಯ್ಕೆ ಆಗುತ್ತಾರೆ. ಕನಿಷ್ಠ 10 ಸಾವಿರ ಜನರಿಗೆ ಸೈಟ್ ಹಂಚಿಕೆ ಮಾಡುತ್ತೇವೆ. ತಾಲೂಕಿನ 94% ಅಂದ್ರೆ ಸುಮಾರು 64 ಸಾವಿರ ಬಡ ಕುಟುಂಬದ ಮಹಿಳೆಯರಿಗೆ ಗೃಹಲಕ್ಷ್ಮಿ ಯೋಜನೆ ತಲುಪಿದೆ. ಇನ್ನು 7–8 % ಫಲಾನುಭವಿಗಳಿಗೆ ತಲುಪಬೇಕಿದೆ. ಇದಕ್ಕಾಗಿ ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದರು.

ಒಟ್ನಲ್ಲಿ ಚನ್ನಪಟ್ಟಣ ಕ್ಷೇತ್ರದ ಉಪಚುನಾವಣೆ ಸಮೀಪ ಇರುವಾಗಲೇ ಮಹತ್ವದ ಹೇಳಿಕೆ, ಬೆಳವಣಿಗೆ ನಡೆಯುತ್ತಿವೆ. ಅದರಲ್ಲೂ ಈ ಬಾರಿ ಕಾಂಗ್ರೆಸ್ ಮತ್ತು ಬಿಜೆಪಿ ನಡುವೆ ಯುದ್ಧ ಶುರುವಾಗುವುದು ಪಕ್ಕಾ ಎಂಬ ಮಾತು ಕೇಳಿಬಂದಿದೆ. ಅದರಲ್ಲೂ ಈ ಕ್ಷೇತ್ರದಲ್ಲಿ ಗೆದ್ದು, ಮತ್ತೊಮ್ಮೆ ತಮ್ಮ ವಶಕ್ಕೆ ಪಡೆಯಬೇಕು ಎಂಬುದು ಕಾಂಗ್ರೆಸ್ ನಾಯಕರ ಗುರಿ ಆಗಿದೆ. ಈ ಕಾರಣಕ್ಕೆ, ಈ ತಿಕ್ಕಾಟದಲ್ಲಿ ಜಯ ಯಾರಿಗೆ?

## ಚನ್ನಪಟ್ಟಣದಲ್ಲಿ ಪ್ರತಿಷ್ಠೆಯ ಪಣ

ಪುಟ 1ರಿಂದ

ವಿಜಯನಗರದ ಸಂಡೂರು ಕ್ಷೇತ್ರಗಳಿಗೆ ಉಪ ಚುನಾವಣೆ ನಡೆಯಲಿದೆ.

ಹೆಚ್.ಡಿ.ಕುಮಾರಸ್ವಾಮಿ ಅವರ ರಾಜೀನಾಮೆಯಿಂದ ತೆರವಾಗಿರುವ ಚನ್ನಪಟ್ಟಣಕ್ಕೆ ಡಿ.ಕೆ.ಶಿವಕುಮಾರ್? ಎಂಟ್ರಿ ಕೊಟ್ಟಿದ್ದಾರೆ. ಇದರಿಂದಾಗಿ ಪ್ರತಿಷ್ಠೆಯ ಕ್ಷೇತ್ರವಾಗಿದೆ. 'ಡಿಕೆ ಬ್ರದರ್ಸ್' ಸೋಲಿಸಲು ಮೈತ್ರಿ ಪಕ್ಷ ಚಿಹ್ನೆ ವಿನಿಯಮದಡಿ ಕಣಕ್ಕಿಳಿಯುವ ಬಗ್ಗೆ ಚಿಂತನೆ ನಡೆಸಿದೆ. ಆದರೆ ಮೈತ್ರಿ ಅಭ್ಯರ್ಥಿಗಳ ಪಟ್ಟಿಯಲ್ಲಿ ಹಲವರ ಹೆಸರಿದ್ದು, ಯಾರಿಗೆ ಟಿಕೆಟ್ ಸಿಗುತ್ತೆ ಅನ್ನೋದನ್ನು ಕಾದು ನೋಡಬೇಕಿದೆ.

ಜೆಡಿಎಸ್ ಚಿಹ್ನೆಯಿಂದಲೇ ಚುನಾವಣೆಗೆ ಸ್ಪರ್ಧೆ: ಚನ್ನಪಟ್ಟಣ ಜೆಡಿಎಸ್ ಪಕ್ಷದ ಭದ್ರಕೋಟೆ. ಈ ಕ್ಷೇತ್ರ ಹೇಳಿ ಕೇಳಿ ಪ್ರಸ್ತುತ ಕೇಂದ್ರ ಸಂಪುಟ ಸಚಿವರಾಗಿರುವ ಹೆಚ್.ಡಿ.ಕುಮಾರಸ್ವಾಮಿ ನಿಕಟಪೂರ್ವ ಶಾಸಕರಾಗಿದ್ದ ಕ್ಷೇತ್ರವಾಗಿದೆ. ಅಲ್ಲದೇ ಡಿಸಿಎಂ ಡಿ.ಕೆ.ಶಿವಕುಮಾರ್ ಹಾಗೂ ಡಿ.ಕೆ.ಸುರೇಶ್ ಅವರಿಗೆ ಟಾಂಗ್ ಕೊಡಬೇಕಾದರೆ ಈ ಕ್ಷೇತ್ರದಲ್ಲಿ ಬಲಿಷ್ಠ ಅಭ್ಯರ್ಥಿಯನ್ನೇ ಕಣಕ್ಕಿಳಿಸಬೇಕು. ಈ ಕ್ಷೇತ್ರದಲ್ಲಿ ಜೆಡಿಎಸ್ ಚಿಹ್ನೆಯಡಿ ಮೈತ್ರಿ ಸ್ಪರ್ಧೆ ಬಹುತೇಕ ಖಚಿತ ಎನ್ನಲಾಗುತ್ತಿದೆ. ಇದರಿಂದಾಗಿ ನಿಖಿಲ್ ಕುಮಾರಸ್ವಾಮಿ ಅಥವಾ ಜಯಮುತ್ತು ಅವರನ್ನೇ ಅಭ್ಯರ್ಥಿಯನ್ನಾಗಿಸಬೇಕೆಂಬ ಕೂಗು ಪಕ್ಷದಲ್ಲಿ ಕೇಳಿ ಬರುತ್ತಿದೆ. ಮತ್ತೊಂದೆಡೆ, ಮಾಜಿ ಸಚಿವ ಸಿ.ಪಿ.ಯೋಗೇಶ್ವರ್ ಅವರನ್ನು ಜೆಡಿಎಸ್ ಚಿಹ್ನೆಯಿಂದ ನಿಲ್ಲಿಸುವ ತಂತ್ರವೂ ಚಾಲ್ತಿಯಲ್ಲಿದೆ ಎಂದು ಹೇಳಲಾಗುತ್ತಿದೆ.

ಸದ್ಯದ ಪರಿಸ್ಥಿತಿಯಲ್ಲಿ ಚನ್ನಪಟ್ಟಣ ಉಪ ಚುನಾವಣೆ ಹೆಚ್.ಡಿ.ಕುಮಾರಸ್ವಾಮಿ ಹಾಗೂ ಡಿ.ಕೆ.ಶಿವಕುಮಾರ್ ನಡುವಿನ ಫೈಟ್ ಆಗಿದೆ. ಅಭ್ಯರ್ಥಿಗಳಾಗಿ ಕಣಕ್ಕೆ ಯಾರೇ ಬಂದ್ರೂ ಇಬ್ಬರಿಗೂ ಇದು ಪ್ರತಿಷ್ಠೆಯ ಚುನಾವಣೆ. ಡಿ.ಕೆ.ಶಿವಕುಮಾರ್ ಅವರು ಶತಾಯಗತಾಯ ಚನ್ನಪಟ್ಟಣದಲ್ಲಿ ಕಾಂಗ್ರೆಸ್ ಬಾವುಟ ಹಾರಿಸಬೇಕೆಂಬ ಪಣ ತೊಟ್ಟಿದ್ದರೆ, ಕ್ಷೇತ್ರವನ್ನು ಉಳಿಸಿಕೊಳ್ಳಲೇಬೇಕಿರುವುದು ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿಗೆ ಅನಿವಾರ್ಯ. ಹೀಗಾಗಿ, ಉಪಚುನಾವಣಾ ಕಣ ರಂಗೇರಿದೆ.

## ಮೂರು ಲಕ್ಷ ನೀರಿನ ಮಾದರಿ ಸಂಗ್ರಹ

ಪುಟ 1ರಿಂದ

ಜಲಮೂಲಗಳನ್ನು ಬಳಸಿ ಶುದ್ಧ ನೀರು ಸರಬರಾಜು ಮಾಡಲು ಎಲ್ಲ ರೀತಿಯ ಕ್ರಮಗಳನ್ನು ಕೈಗೊಳ್ಳಲಾಗಿದೆ ಎಂದು ಸಚಿವ ಪ್ರಿಯಾಂಕ್ ಖರ್ಗೆಹೇಳಿದ್ದಾರೆ. ಅಸ್ವಸ್ಥರಾದ ಗ್ರಾಮಸ್ಥರ ಆರೋಗ್ಯದ ಬಗ್ಗೆ ಎಚ್ಚರವಹಿಸಲಾಗಿದೆ ಎಂದೂ ಅವರು ತಿಳಿಸಿದ್ದಾರೆ. ಗ್ರಾಮೀಣ ನೀರು ಸರಬರಾಜು ಇಲಾಖೆಯ ಹಿರಿಯ ಅಧಿಕಾರಿಗಳ ಸಭೆ ನಡೆಸಿದ ಸಚಿವರಿಗೆ ಅಪರ ಮುಖ್ಯ ಕಾರ್ಯದರ್ಶಿ ಅಂಜುಂ ಪರವೇಜ್ ಅವರು ಮಾಹಿತಿ ನೀಡಿ ಗ್ರಾಮಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ಹಾಗೂ ಜೂನಿಯರ್ ಎಂಜನಿಯರ್ ರಾಜ್ಯದ 3000 ಗ್ರಾಮಗಳಿಗೆ ಭೇಟಿ ನೀಡಿ ಮಾಹಿತಿ ಸಂಗ್ರಹಿಸಿದ್ದಾರೆಂದು ಹೇಳಿದರು. ಗ್ರಾಮೀಣ ನೀರು ಸರಬರಾಜು ಇಲಾಖೆಯ ಆಯುಕ್ತರಾದ ಕೆ.ನಾಗೇಂದ್ರಪ್ರಸಾದ್ ಚರ್ಚೆಯಲ್ಲಿ ಪಾಲ್ಗೊಂಡರು.

# ಸರ್ಕಾರಿ ಶಾಲೆಗೆ ಸಿ.ಟಿ.ಶಂಕರ್ ಅವರಿಂದ ಶಾಲಾ ವಾಹನ ಕೊಡುಗೆ

ಮದ್ದೂರು: ತಿಮ್ಮದಾಸ್ ಟ್ರಾವೆಲ್ಸ್ ಮಾಲೀಕರು ಹಾಗೂ ಸಮಾಜ ಸೇವಕರಾದ ಸಿ.ಟಿ.ಶಂಕರ್ ಅವರು ಸರ್ಕಾರಿ ಶಾಲಾ ಮಕ್ಕಳ ಅನುಕೂಲಕ್ಕಾಗಿ ವಾಹನವನ್ನು ಕೊಡುಗೆ ನೀಡಿರುವುದು ಸಂತಸದ ಸಂಗತಿ ಎಂದು ಶಾಸಕ ಕೆ.ಎಂ.ಉದಯ್ ಮೆಚ್ಚುಗೆ ವ್ಯಕ್ತಪಡಿಸಿದರು.

ತಾಲೂಕಿನ ಆತಗೂರು ಹೋಬಳಿಯ ಮಲ್ಲನಕುಪ್ಪೆ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಪಾಠಶಾಲೆ (ಆಂಗ್ಲ ಮಾಧ್ಯಮ) ಶಾಲೆಯ ವಿದ್ಯಾರ್ಥಿಗಳ ಅನುಕೂಲಕ್ಕಾಗಿ ಸಿ.ಟಿ.ಶಂಕರ್ ಅವರು ದಾನವಾಗಿ ನೀಡಿರುವ ವಾಹನವನ್ನು ಶಾಲೆಯ ಆಡಳಿತ ಮಂಡಳಿಗೆ ಹಸ್ತಾಂತರಿಸಿ ಮಾತನಾಡಿದರು. ಮಲ್ಲನಕುಪ್ಪೆ ಗ್ರಾಮ ಪಂಚಾಯಿತಿ ದೊಡ್ಡ ಪಂಚಾಯಿತಿಯಾಗಿದ್ದು, ಇಲ್ಲಿಯಾ ಸರ್ಕಾರಿ ಶಾಲೆಗೆ ಮಲ್ಲನಕುಪ್ಪೆ, ಹನುಮಂತಪುರ, ಯರಗನಹಳ್ಳಿ, ತೊರೆಶೆಟ್ಟಿಹಳ್ಳಿ, ಅಡಗನಹಳ್ಳಿ, ಬ್ಯಾಲದಕೆರೆ, ದೊಡ್ಡ ಅಂಕನಹಳ್ಳಿ, ಅಂಕನಾಥಪುರ ಹಾಗೂ ಚನ್ನಪಟ್ಟಣ ತಾಲೂಕಿನ ತಿಮ್ಮಸಂದ್ರ, ಕದಿರುಮಂಗಲ ಸೇರಿದಂತೆ ಹಲವಾರು ಗ್ರಾಮಗಳಿಂದ ಈ ಶಾಲೆಗೆ ಹೆಚ್ಚಿನ ವಿದ್ಯಾರ್ಥಿಗಳು ಬರುತ್ತಿದ್ದು. ಇಲ್ಲಿಯಾ ವಿದ್ಯಾರ್ಥಿಗಳಿಗೆ ಶಾಲೆಗೆ ಬರಲು ತೊಂದರೆಯಾಗಬಾರದು ಎಂಬ ಉದ್ದೇಶದಿಂದ ಸಿ.ಟಿ.ಶಂಕರ್ ಅವರು ಸ್ವಂತ ಹಣದಲ್ಲಿ ವಾಹನ ನೀಡಿರುವುದು ಪ್ರಶಂಸನೀಯ ಸಂಗತಿ ಎಂದು ಪ್ರಶಂಸಿದರು. ಎಲ್.ಕೆ.ಜಿ ಹಾಗೂ ಯು.ಕೆ.ಜಿ. ಯಲ್ಲಿ 50 ವಿದ್ಯಾರ್ಥಿಗಳು, 1 ರಿಂದ 7 ನೇ ತರಗತಿಯವರೆಗೆ ಸುಮಾರು 210 ಕ್ಕೂ ಹೆಚ್ಚು ವಿದ್ಯಾರ್ಥಿಗಳು ವ್ಯಾಂಸಗ ಮಾಡುತ್ತಿದ್ದು, ಇತ್ತೀಚ್ಚಿನ ದಿನಗಳಲ್ಲಿ ಸರ್ಕಾರಿ ಶಾಲೆಯಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಮಕ್ಕಳ ಹಾಜರಾತಿ ಕಂಡು ಬರುತ್ತಿರುವುದು ಒಳ್ಳೆಯ ಬೆಳವಣಿಗೆ ಎಂದರು.

ಶಾಲೆಯ ಸಮಗ್ರ ಅಭಿವೃದ್ಧಿಗೆ



ಮದ್ದೂರು ತಾಲೂಕಿನ ಆತಗೂರು ಹೋಬಳಿಯ ಮಲ್ಲನಕುಪ್ಪೆ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಪಾಠಶಾಲೆ (ಆಂಗ್ಲ ಮಾಧ್ಯಮ) ಶಾಲೆಯ ವಿದ್ಯಾರ್ಥಿಗಳ ಅನುಕೂಲಕ್ಕಾಗಿ ಸಮಾಜ ಸೇವಕ ಸಿ.ಟಿ.ಶಂಕರ್ ಅವರು ದಾನವಾಗಿ ನೀಡಿರುವ ವಾಹನವನ್ನು ಶಾಲೆಯ ಆಡಳಿತ ಮಂಡಳಿಗೆ ಶಾಸಕ ಕೆ.ಎಂ.ಉದಯ್ ಹಸ್ತಾಂತರಿಸಿದರು. ಸಿ.ಟಿ.ಶಂಕರ್, ಸಿ.ಎಚ್.ಕಾಳೀರಯ್ಯ, ದೇವರಾಜು, ಎಂ.ಬಿ.ಕುಮಾರ್, ರವಿ, ಸಿದ್ದರಾಜು ಇದ್ದರು.

ಈಗಾಗಲೇ ಹಂತ ಹಂತವಾಗಿ ಕ್ರಮ ಕೈಗೊಳ್ಳುತ್ತಿದ್ದು, ಮುಂದಿನ ದಿನಗಳಲ್ಲಿ ಮತ್ತಷ್ಟು ಮೂಲ ಸೌಕರ್ಯಗಳನ್ನು ನೀಡುವ ಮೂಲಕ ವಿದ್ಯಾರ್ಥಿಗಳಿಗೆ ಅನುಕೂಲ ಕಲ್ಪಿಸಲಾಗುವುದು. ವಿದ್ಯಾರ್ಥಿಗಳು ಕಠಿಣ ವ್ಯಾಸಂಗ ಮಾಡುವ ಮೂಲಕ ಸಮಾಜದಲ್ಲಿ ಉನ್ನತ ಸ್ಥಾನಗಳನ್ನು ಅಲಂಕರಿಸಿ ನೊಂದವರ ಬಾಳಿಗೆ ಬೆಳಕಾಗಬೇಕು ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು. ಸರ್ಕಾರಿ ಶಾಲೆಗೆ ಶಾಲಾ ವಾಹನವನ್ನು ದಾನ ನೀಡಿದ ತಿಮ್ಮದಾಸ್ ಟ್ರಾವೆಲ್ಸ್ ಮಾಲೀಕ ಹಾಗೂ ಸಮಾಜ ಸೇವಕ ಸಿ.ಟಿ.ಶಂಕರ್ ಮಾತನಾಡಿ, ಮಕ್ಕಳಿಗೆ ವಿದ್ಯಾಭ್ಯಾಸ ಹಾಗೂ ಆರೋಗ್ಯ ಅತಿ ಮುಖ್ಯವಾಗಿದ್ದು, ಇವೆರಡು ಇದ್ದರೆ ಎಲ್ಲಿ ಬೇಕಾದರು ಹೋಗಿ ಒಳ್ಳೆಯ ರೀತಿಯಲ್ಲಿ ಬದುಕು ಕಟ್ಟಿಕೊಳ್ಳಬಹುದು ಎಂದರು. ಶಾಲೆಯ ವಿದ್ಯಾರ್ಥಿಗಳು ವಿವಿಧ ಗ್ರಾಮಗಳಿಂದ ಶಾಲೆಗೆ ಬರಲು ತೊಂದರೆಯಾಗುತ್ತಿದೆ ಎಂದು ಎಸ್.ಡಿ.ಎಂ.ಸಿ ಆಡಳಿತ ಮಂಡಳಿ ಹಾಗೂ ಗ್ರಾಮಸ್ಥರು ನನ್ನ ಗಮನಕ್ಕೆ ತಂದ ಹಿನ್ನೆಲೆಯಲ್ಲಿ ವಿದ್ಯಾರ್ಥಿಗಳಿಗೆ ಅನುಕೂಲವಾಗಲಿ ಎಂಬ ಉದ್ದೇಶದಿಂದ ಸ್ವಂತ ಹಣದಲ್ಲಿ ವಾಹನ ಖರೀದಿಸಿ ನೀಡಲಾಗಿದೆ. ಮುಂದೆಯೂ ಈ ಶಾಲೆಗೆ ನನ್ನ ಕೈಯಲ್ಲಾದ ಸಹಾಯ ಮಾಡುತ್ತೇನೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಸರ್ಕಾರಿ ಶಾಲೆಯಲ್ಲಿ ವ್ಯಾಸಂಗ ಮಾಡಿದ ಹಲವಾರು ವ್ಯಕ್ತಿಗಳು ರಾಷ್ಟ್ರ ಹಾಗೂ ಅಂತರಾಷ್ಟ್ರಿಯ ಮಟ್ಟದಲ್ಲಿ ಸಾಧನೆ ಮಾಡಿದ್ದಾರೆ. ಪಾಲಕರು ಖಾಸಗಿ ಶಾಲೆಗಳ ವ್ಯಾಮೋಹಕ್ಕೆ ಒಳಗಾಗದೆ ಸರ್ಕಾರಿ ಶಾಲೆಗಳಿಗೆ ಸೇರಿಸುವ ಮೂಲಕ ಸರ್ಕಾರಿ ಶಾಲೆಗಳ ಉಳಿವಿಗೆ ಮುಂದಾಗಬೇಕು ಎಂದು ಮನವಿ ಮಾಡಿದರು. ಕ್ಷೇತ್ರ ಶಿಕ್ಷಣಾಧಿಕಾರಿ ಸಿ.ಎಚ್.ಕಾಳೀರಯ್ಯ, ಸರ್ಕಾರಿ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ದೇವರಾಜು, ಎಸ್.ಡಿ.ಎಂ.ಸಿ ಅಧ್ಯಕ್ಷ ಎಂ.ಬಿ.ಕುಮಾರ್, ಉಪಾಧ್ಯಕ್ಷ ಸಿದ್ದರಾಜು, ಗ್ರಾ.ಪಂ ಉಪಾಧ್ಯಕ್ಷ ರವಿ, ಮುಖ್ಯ ಶಿಕ್ಷಕ ನಾಗರಾಜು, ಅಕ್ಷರ ದಾಸೋಹ ಅಧಿಕಾರಿ ಡಾ.ಎಸ್.ಸಿ ಮಂಗಳಮ್ಮ, ಮುಖಂಡರಾದ ಲೋಕೇಶ್, ರಾಜೇಶ್, ಮಧು, ರಾಮಲಿಂಗಯ್ಯ ಸೇರಿದಂತೆ ಇತರರು ಇದ್ದರು.

## ಜರ್ಮನಿ ಅಧಿಕಾರಿಗಳು ನಿಯೋಗ ರೈತರ ಜಮೀನಿಗೆ ಭೇಟಿ



ಗುಂಡ್ಲುಪೇಟೆ: ರಾಜ್ಯ ಅರಿಶಿಣ ಬೆಳೆಗಾರರ ಒಕ್ಕೂಟ ಮತ್ತು ಶ್ರಮಸಂಜಾತ ರೈತ ಉತ್ಪಾದಕರ ಕಂಪನಿ ಅರಿಶಿಣ ಕೃಷಿಯನ್ನು ಯಂತ್ರೀಕರಣಗೊಳಿಸುವ ನಿಟ್ಟಿನಲ್ಲಿ ಜರ್ಮನಿ ದೇಶದ ಗ್ರೇಮೆ ಕಂಪನಿಯ ಜೊತೆಗೆ ಕೆಲಸ ನಿರ್ವಹಿಸುತ್ತಿದ್ದು

ಗುಂಡ್ಲುಪೇಟೆಯಲ್ಲಿ ಈ ಸಾಲಿನಿಂದ ಅರಿಶಿಣವನ್ನು ಯಂತ್ರದಲ್ಲಿ ನಾಟಿ ಮಾಡಲಾಗುತ್ತಿದೆ, ಅಲ್ಲದೆ ಕೃಷಿ ಕಾರ್ಮಿಕರ ಕೊರತೆ ಆಗುತ್ತಿರುವುದರಿಂದಅಲ್ಲದೆ ಯಂತ್ರದಲ್ಲೇ ಅರಿಶಿನವನ್ನು ಒಕ್ಕಣೆ ಮಾಡುವ ಉದ್ದೇಶವನ್ನು ಹೊಂದಿದ್ದೇವೆ.

ಈಗಾಗಲೇ ಸುಮಾರು ಕಡೆ ನಾಟಿ ಮಾಡಿದ್ದು ಯಂತ್ರದಲ್ಲಿ ನಾಟಿ ಮಾಡಿದ ಜಮೀನುಗಳಲ್ಲಿ ಗಿಡಗಳು ಹೇಗೆ ಬೆಳವಣಿಗೆ ಆಗುತ್ತಿದೆ ಅನ್ನುವುದನ್ನು ಖುದ್ದಾಗಿ ರೈತರ ಜಮೀನುಗಳಿಗೆ ತೆರಳಿ ವೀಕ್ಷಣೆ ಮಾಡಲು ಮತ್ತು ಇಲ್ಲಿನ ಬೆಳೆಗಾರರೊಂದಿಗೆ ಸಮಾಲೋಚನೆ ಮಾಡಲು ಜರ್ಮನಿ ದೇಶದ ಗ್ರಿಮೆ(Grimme) ಕಂಪನಿಯ ಒಆ ಯಾದ ಫ್ರೆಂಜ್ ಬೇರ್ನ್ಡ್ ಕೃತಪ್, ಗ್ರಿಮ್ಮೆ ಕಂಪನಿಯ

ಅಇಔ ಅಭಿಷೇಕ್ ಸಿಂಗ್ ಶಕ್ತಿಮಾನ್–ಗ್ರಿಮ್ಮೆ ಯ ಭಾರತದ ಮುಖ್ಯಸ್ಥರಾದ ಹಿಮಾನ್ಯ, ಅರಿಶಿಣ ಬೆಳೆಗಾರರ ಒಕ್ಕೂಟ ಮತ್ತು ಶ್ರಮಸಂಜಾತ ರೈತ ಉತ್ಪಾದಕರ ಕಂಪನಿಯ ಅಧ್ಯಕ್ಷರಾದ ನಾಗಾರ್ಜುನ ಕುಮಾರ್, ನಿರ್ದೇಶಕರಾದ ಚಿದಾನಂದ, ರಾಜು, ಪ್ರದೀಪ್, ಶಿವಬಸವೇಗೌಡ, ಚಂದ್ರಶೇಖರ, ಖಿಂಖಆಔ ಸಂಸ್ಥೆಯ ಆಡಿ ಮೋಹನ್, ಊಆಈಅ ಬ್ಯಾಂಕ್ ಮ್ಯಾನೇಜರ್ ಸೆಂತಿಲ್, R M ಸ್ವಾಮಿ, ರೈತ ಮುಖಂಡರಾದ ಕುಂದುಕೆರೆ ಸಂಪತ್ತು ಹಾಗೂ 100ಕ್ಕೂ ಹೆಚ್ಚು ರೈತರು ಉಪಸ್ಥಿತರಿದ್ದರು

## ಉಚಿತ ಕಣ್ಣಿನ ತಪಾಸಣಾ ಕಾರ್ಯಕ್ರಮ

ಮಾಲೂರು: ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಸಂಸ್ಥೆ ವತಿಯಿಂದ ತೊರ್ನಹಳ್ಳಿ ಗ್ರಾಮದಲ್ಲಿ ಉಚಿತ ಕಣ್ಣಿನ ತಪಾಸಣಾ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು. ಕಾರ್ಯಕ್ರಮವನ್ನು ಕುರಿತು ಡಾಕ್ಟರ್ ದೇವರಾಜ್ ಮಾತನಾಡಿ ಪ್ರತಿಯೊಬ್ಬರೂ ಕಾಲಕಾಲಕ್ಕೆ ತಮ್ಮ ಆರೋಗ್ಯ ತಪಾಸಣೆ ಮಾಡಿಕೊಂಡು ಸುಂದರ ಬದುಕು ಕಟ್ಟಿಕೊಳ್ಳಬೇಕು.ಮನುಷ್ಯ ಆರೋವಂತನಾಗಿದ್ದರೆ ಏನಾದರೂ ಸಾಧನೆ ಮಾಡಬಹುದು. ಕಣ್ಣು ಅತಿ ಸೂಕ್ಷ್ಮವಾದ ಅಂಗವಾಗಿದ್ದು, ಇದರ ಕಾಳಜಿ ಅತ್ಯವಶ್ಯಕ. ಸಾಮಾನ್ಯ ಜನರಿಗೆ ಆಸ್ಪತ್ರೆಯ ಖರ್ಚು ವೆಚ್ಚಗಳು ದುಬಾರಿಯಾಗಿರುವ ಇಂತಹ ಸನ್ನಿವೇಶದಲ್ಲಿ ಆರೋಗ್ಯ ತಪಾಸಣಾ ಶಿಬಿರ ಸಹಕಾರಿಯಾಗುತ್ತಿದೆ ಎಂದು ತಿಳಿಸಿದರು.

ಒಕ್ಕೂಟದ ಅಧ್ಯಕ್ಷ ಆಂಜಿನಪ್ಪ ಮಾತನಾಡಿ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯು ಮಧ್ಯಮ, ಬಡ ಹಾಗೂ ಹಿಂದುಳಿದ ಜನರನ್ನು ಆರ್ಥಿಕವಾಗಿ, ಸಾಮಾಜಿಕವಾಗಿ, ಶೈಕ್ಷಣಿಕವಾಗಿ ಮೇಲೆತ್ತುವ ಕೆಲಸವನ್ನು ಮಾಡುತ್ತಿದೆ ಉತ್ತಮ ಯೋಜನೆಗಳನ್ನು ಹಾಕಿಕೊಂಡು ಸಮಾಜದ ಅಭಿವೃದ್ಧಿಗೆ ಶ್ರಮಿಸುತ್ತಿದೆ ಎಂದು ತಿಳಿಸಿದರು. ಈ ಕಾರ್ಯಕ್ರಮದಲ್ಲಿ ಒಕ್ಕೂಟದ ಅಧ್ಯಕ್ಷ ಆಂಜಿನಪ್ಪ, ಮುನಿಲಕ್ಷ್ಮಮ್ಮ ಉಪಾಧ್ಯಕ್ಷರು, ವೆಂಕಟರಮಣಪ್ಪ ಊರಿನ ಮುಖ್ಯಸ್ಥರು, ದೇವರಾಜ್, ಸರದಾರ್, ಜ್ಞಾನವಿಕಾಸ ಸಮನ್ವಯ ಅಧಿಕಾರಿ, ಸೇವಾ ಪ್ರತಿನಿಧಿ ಪದ್ಮ, ಸಂಘದವರು ಕಾರ್ಯಕ್ರಮದಲ್ಲಿ ಹಾಜರಿದ್ದರು.

– ಗೋಪಾಲಕೃಷ್ಣ, ಕೋಲಾರ



## ವಿಶೇಷ ಕಾಯ್ದೆ ಜಾರಿಗೆಗೆ ಸಿಎಂ ಸಿದ್ದರಾಮಯ್ಯ ಘೋಷಣೆ

ಪುಟ 1ರಿಂದ

ಹಿಂದಿನ ಸರ್ಕಾರ ಸತ್ತ ಕುರಿಗಳಿಗೆ ಪರಿಹಾರ ನೀಡುವ ಅನುಗ್ರಹ ಯೋಜನೆಯನ್ನು ನಿಲ್ಲಿಸಿದ್ದು, ಈ ಕುರಿತು ಪರಿಹಾರ ನೀಡುವ ಬಗ್ಗೆ ಎಲ್ಲಾ ಜಿಲ್ಲೆಗಳಿಂದ ವರದಿ ತರಿಸಲಾಗುವುದು.

ಅನುಗ್ರಹ ಯೋಜನೆಯಡಿ ಒಂದು ಕುರಿ ಆಕಸ್ಮಿಕವಾಗಿ ಮರಣ ಹೊಂದಿದರೆ 5 ಸಾವಿರ ರೂಪಾಯಿ ಪರಿಹಾರ ನೀಡಲಾಗುತ್ತದೆ. ಈ ಮೊತ್ತವನ್ನು ಇನ್ನಷ್ಟು ಹೆಚ್ಚಿಸುವ ಬಗ್ಗೆ ಪರಿಶೀಲನೆ ಮಾಡಲಾಗುವುದು.

ಗೋಮಾಳಗಳನ್ನು ಯಾರಿಗೂ ಪರಭಾರೆ ಮಾಡಬಾರದೆಂದು ಈ ಹಿಂದೆ ನಮ್ಮ ಸರ್ಕಾರದ ಅವಧಿಯಲ್ಲಿ ಆದೇಶ ಹೊರಡಿಸಲಾಗಿತ್ತು. ಗೋಮಾಳಗಳ ರಕ್ಷಣೆ ಮಾಡಲಾಗುವುದು.

ಅರಣ್ಯ ಪ್ರದೇಶದಲ್ಲಿ ಕುರಿಗಳನ್ನು ಮಾತ್ರ ಮೇಯಿಸಲು ಅವಕಾಶ ನೀಡುವ ಬಗ್ಗೆ ಅರಣ್ಯ ಇಲಾಖೆ ಅಧಿಕಾರಿಗಳಿಗೆ ಸೂಚನೆ ನೀಡಲಾಗುವುದು.

ಕುರಿಗಳ ಅಭಿವೃದ್ಧಿ, ಕುರಿಗಾಹಿಗಳ ಭದ್ರತೆ, ಕುರಿ ವ್ಯಾಪಾರಕ್ಕೆ ನೆರವು, ಮಾರುಕಟ್ಟೆ ವಿಸ್ತರಣೆಗೆ ನೆರವು ನೀಡಲಾಗುವುದು.

## ಸಿದ್ದರಾಮಯ್ಯ ಭೇಟಿ ಮಾಡಿದ ರೇಣುಕಾಸ್ವಾಮಿ ತಂದೆ–ತಾಯಿ

ಪುಟ 1ರಿಂದ

ರೇಣುಕಾಸ್ವಾಮಿಯನ್ನು ಕಳೆದುಕೊಂಡ ತಂದೆ ತಾಯಿ ಕಾವೇರಿ ನಿವಾಸದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಭೇಟಿ ಮಾಡಿ ಸಮಸ್ಯೆ ಹೇಳಿಕೊಂಡಿದ್ದಾರೆ. ರೇಣುಕಾಸ್ವಾಮಿ ಅವರ ತಂದೆ , ತಾಯಿ ಇಂದು ಕಾವೇರಿಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಭೇಟಿಯಾಗಿ ತಮ್ಮ ಅಳಲು ತೋಡಿಕೊಂಡಿದ್ದಾರೆ, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಮುಂದೆ ಪುತ್ರನಿ ಸಾವಿನ ಕುರಿತು ತಂದಿ ತಾಯಿ ಇಬ್ಬರು ಕಣ್ಣೀರು ಹಾಕಿದ್ದಾರೆ.

ತಪ್ಪು ಮಾಡಿದ್ದರೆ ಕರೆದು ಬುದ್ಧಿ ಹೇಳಬಹುದಿತ್ತು, ಅಥವಾ ಪೊಲೀಸರಿಗೆ ದೂರು ಕೊಡಬಹುದಿತ್ತು ಆದರೆ ಬರ್ಬರವಾಗಿ ಕೊಂದುಬಿಡುವುದು ಯಾವ ನ್ಯಾಯ ಎಂದು ಅವಲತ್ತುಕೊಂಡಿದ್ದಾರೆ. ರೇಣುಕಾಸ್ವಾಮಿ ತಂದೆ ತಾಯಿ ಮಾತು ಕೇಳಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸಾಂತ್ವಾನ ಹೇಳಿ, ಪೊಲೀಸ್ ತನಿಖೆ ನಡೆಯುತ್ತಿದ್ದು, ತಪ್ಪಿತಸ್ಥರಿಗೆ ಕಾನೂನು ಪ್ರಕಾರ ಕ್ರಮಕೈಗೊಳ್ಳುವುದಾಗಿ ಹೇಳಿದ್ದಾರೆ. ಅಲ್ಲದೇ ಈ ಪ್ರಕರಣದಲ್ಲಿ ಪೊಲೀಸ್ ತನಿಖೆಯ ಬಗ್ಗೆ ರೇಣುಕಾಸ್ವಾಮಿ ಪೋಷಕರು ಸಮಾಧಾನ ವ್ಯಕ್ತಪಡಿಸಿದ್ದಾರೆ. ನಮ್ಮ ಕುಟುಂಬಕ್ಕೆ ಆಧಾರವಾಗಿದ್ದೆ ರೇಣುಕಾಸ್ವಾಮಿ, ಹೆಂಡತಿ ಮೊಮ್ಮಗುವಿಗೆ ಮುಂದೆ ಯಾರು ಗತಿ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಬಳಿ ನೋವು ತೋಡಿಕೊಂಡಿದ್ದಾರೆ.

ಈ ವೇಳೆ ಕುಟುಂಬ ನಿರ್ವಹಣೆಗಾಗಿ ತಮ್ಮ (ಸೊಸೆ) ಮಗಳಿಗೆ ಸರ್ಕಾರಿ ಉದ್ಯೋಗ ಕೊಡಿಸುವಂತೆ ಮನವಿ ಮಾಡಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ಇವರ ಬೇಡಿಕೆಗೆ ಸಕಾರಾತ್ಮಕವಾಗಿ ಸ್ಪಂದಿಸಿದ್ದಾರೆ ಎನ್ನಲಾಗಿದೆ .ಬಿಜೆಪಿ ರಾಜ್ಯಾಧ್ಯಕ್ಷ ಬಿ ವೈ ವಿಜಯೇಂದ್ರ ನೇತೃತ್ವದಲ್ಲಿ ಬಿಜೆಪಿ ಮುಖಂಡರು, ರೇಣುಕಾಸ್ವಾಮಿ ಪತ್ನಿಗೆ ಪರಿಹಾರ ಕೊಡುವಂತೆ ಒತ್ತಾಯಿಸಿದ್ದರು. ಅಲ್ಲದೆ ನಾಲ್ಕು ತಿಂಗಳ ಗರ್ಭಿಣಿಯಾಗಿರುವ ರೇಣುಕಾಸ್ವಾಮಿ ಪತ್ನಿಗೆ ಸರ್ಕಾರಿ ಉದ್ಯೋಗ ಕೊಡುವಂತೆಯೂ ಒತ್ತಾಯಿಸಿದ್ದಾರೆ.

## ಅನುದಾನ ಸಕಾಲದಲ್ಲಿ ಬಳಸದಿದ್ದರೆ ಅಧಿಕಾರಿಯೇ ಹೊಣೆ..

ಪುಟ 1ರಿಂದ

ಸರಕಾರದಿಂದ ಜಿಲ್ಲೆಯ ವಿವಿಧ ಅಭಿವೃದ್ಧಿ ಕಾಮಗಾರಿ, ಯೋಜನೆಗಳಿಗೆ ಬಿಡುಗಡೆಯಾಗುವ ಅನುದಾನವನ್ನು ಸರಿಯಾದ ಸಮಯದಲ್ಲಿ ಬಳಸದೇ ಉಳಿದರೆ ಸಂಬಂಧಿಸಿದ ಅಧಿಕಾರಿಯನ್ನು ಹೊಣೆಗಾರರನ್ನಾಗಿಸಿ, ಅವರಿಂದಲೇ ಅದನ್ನು ವಸೂಲು ಮಾಡಲು ಸರ್ಕಾರಕ್ಕೆ ಶಿಫಾರಸು ಮಾಡಲಾಗುವುದು ಎಂದು ಕಾರ್ಮಿಕ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ ಲಾಡ್ ಅವರು ಅಧಿಕಾರಿಗಳಿಗೆ ಎಚ್ಚರಿಸಿದರು.

ಧಾರವಾಡ ಜಿಲ್ಲಾ ಪಂಚಾಯತ ಸಭಾಂಗಣದಲ್ಲಿ ನಡೆದ ಕರ್ನಾಟಕ ಅಭಿವೃದ್ಧಿ ಕಾರ್ಯಕ್ರಮಗಳ ಪ್ರಗತಿ ಪರಿಶೀಲನಾ ಕೆಡಿಪಿ ಸಭೆಯಲ್ಲಿ ಅವರು ಮಾತನಾಡಿದರು.

ಇಲಾಖೆಗಳಿಗೆ ಬಿಡುಗಡೆಯಾದ ಅನುದಾನ ಪೂರ್ಣ ಬಳಕೆ ಆಗಬೇಕು. ಬಳಕೆಯಲ್ಲಿ ನಿರ್ಲಕ್ಷ್ಯವಹಿಸಿದರೆ ಸಲ್ಲದು. ಕ್ರಿಯಾಯೋಜನೆ ರೂಪಿಸಿ, ಗುರಿ ನಿಗದಿಗೊಳಿಸುವಾಗ ಆರ್ಥಿಕ ಗುರಿಯನ್ನು ಗುರುತಿಸಬೇಕು. ಅದರ ಪ್ರಕಾರ ಪ್ರಗತಿ ಸಾಧಿಸಬೇಕೆಂದು ಎಂದರು.

## ಸರ್ಕಾರಿ ನೌಕರರ ವರ್ಗಾವಣೆಗೆ ಪರಿಷ್ಕೃತ ಮಾರ್ಗಸೂಚಿ ಪ್ರಕಟ

ಪುಟ 1ರಿಂದ

ಕೈಗೊಳ್ಳಲು ಆಯಾ ಇಲಾಖಾ ಸಚಿವರಿಗೆ ಅಧಿಕಾರ ನೀಡಲಾಗಿದೆ. ವರ್ಗಾವಣೆಯಲ್ಲಿ ಮಾರ್ಗಸೂಚಿಗಳನ್ನು ಹೊರಡಿಸಲು ಸರ್ಕಾರವು ಇಚ್ಛಿಸುತ್ತದೆ. ಈ ಮಾರ್ಗಸೂಚಿಗಳು 2024–25



ನೇ ಸಾಲಿನಿಂದ ಜಾರಿಗೆ ಬರುತ್ತವೆ. ವರ್ಗಾವಣೆ ಉದ್ದೇಶಕ್ಕಾಗಿ ಈಗಾಗಲೇ ಹೊರಡಿಸಲಾಗಿರುವ ಪ್ರತ್ಯೇಕ ಅಧಿನಿಯಮ / ನಿಯಮಗಳು ಅನ್ವಯವಾಗುವ ಸರ್ಕಾರಿ ನೌಕರರಿಗೆ ಈ ಮಾರ್ಗಸೂಚಿಗಳು ಅನ್ವಯವಾಗುವುದಿಲ್ಲ ಎಂದು ಆದೇಶದಲ್ಲಿ ತಿಳಿಸಲಾಗಿದೆ.

ವಿಶೇಷ ಚೇತನ ನೌಕರರಿಗೆ ಸಂಬಂಧಿಸಿದಂತೆ ಕೆಲವು ವಿನಾಯಿತಿಗಳನ್ನು ನೀಡಲಾಗಿದೆ.

ಈ ಬಗ್ಗೆ ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆಯ ಸರ್ಕಾರದ ಅಧೀನ ಕಾರ್ಯದರ್ಶಿ ಆದೇಶ ಹೊರಡಿಸಿದ್ದಾರೆ. ಸರ್ಕಾರಿ ನೌಕರರ ವರ್ಗಾವಣೆಗಳನ್ನು ನಿಯಂತ್ರಿಸುವ ಬಗ್ಗೆ ಪರಿಷ್ಕೃತ

ಮುಂಜಾನೆ ವಾರ್ತೆ
ಕನ್ನಡ ದಿನಪತ್ರಿಕೆ
ಇ-ಪೇಪರ್: www.munjanevarth.com
ಬುಧವಾರ 26 ಜೂನ್ 2024
WEDNESDAY 26 June 2024

# ವೇಶ್ಯಾವಾಟಿಕೆ ಸಂತ್ರಸ್ತೆಯನ್ನು ಅಭಿಯೋಜನೆಗೆ ಗುರಿಪಡಿಸಲಾಗದು: ಹೈಕೋರ್ಟ್

ಬೆಂಗಳೂರು: ವೇಶ್ಯಾವಾಟಿಕೆಯಲ್ಲಿ ಸಿಲುಕುವ ಸಂತ್ರಸ್ತೆಯನ್ನು ಅಭಿಯೋಜನೆಗೆ ಗುರಿಪಡಿಸುವುದಕ್ಕೆ ಕಾನೂನಿನಲ್ಲಿ ಅವಕಾಶವಿಲ್ಲ ಎಂದು ಹೈಕೋರ್ಟ್ ಸ್ಪಷ್ಟಪಡಿಸಿದೆ.

ವೇಶ್ಯಾವಾಟಿಕೆ ಆರೋಪಕ್ಕೆ ಸಂಬಂಧಿಸಿದಂತೆ ತನ್ನ ವಿರುದ್ಧ ವಿಚಾರಣಾ ನ್ಯಾಯಾಲಯ ನಡೆಸುತ್ತಿರುವ ವಿಚಾರಣಾ ಪ್ರಕ್ರಿಯೆ ರದ್ದುಪಡಿಸುವಂತೆ ಕೋರಿ ಚಿಕ್ಕಮಗಳೂರಿನ ಮಹಿಳೆಯೊಬ್ಬರು ಅರ್ಜಿ ಸಲ್ಲಿಸಿದ್ದರು. ಅರ್ಜಿ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಎಂ. ನಾಗಪ್ರಸನ್ನ ಅವರಿದ್ದ ನ್ಯಾಯಪೀಠ ಈ ಆದೇಶ ಮಾಡಿದೆ.

ಅಲ್ಲದೆ, ಅರ್ಜಿದಾರೆಯ ವಿರುದ್ಧದ ಕುಂದಾಪುರದ ಹೆಚ್ಚುವರಿ ಸಿವಿಲ್ ಮತ್ತು ಜೆಎಂಎಫ್‌ಸಿ ನ್ಯಾಯಾಲಯದ ವಿಚಾರಣೆಯನ್ನು ರದ್ದುಪಡಿಸಿದೆ. ವೇಶ್ಯಾವಾಟಿಕೆ ಆರೋಪ ಸಂಬಂಧ ಅರ್ಜಿದಾರೆಯ ವಿರುದ್ಧ ಮಾನವ ಕಳ್ಳ ಸಾಗಣೆ ತಡೆ ಕಾಯ್ದೆ–1956ರ ಸೆಕ್ಷನ್ 5 ಅಡಿಯಲ್ಲಿ ವಿಚಾರಣಾ ನ್ಯಾಯಾಲಯ ಕಾಗ್ನಿಜೆನ್ಸ್ ತೆಗೆದುಕೊಂಡಿದೆ. ಆದರೆ, ಅರ್ಜಿದಾರೆಯೇ ವೇಶ್ಯಾವಾಟಿಕೆ ಸಂತ್ರಸ್ತೆಯಾಗಿದ್ದಾರೆ ಎನ್ನುವುದು ಸತ್ಯಾಂಶ. ಸಂತ್ರಸ್ತ ಮಹಿಳೆಯನ್ನು ಶಿಕ್ಷಿಸಬೇಕು ಎಂದು ಕಾಯ್ದೆಯ ಸೆಕ್ಷನ್ 5ರಲ್ಲಿ ಎಲ್ಲಿಯೂ ಹೇಳಿಲ್ಲ. ಹಾಗಾಗಿ, ಆಕೆಯ ವಿರುದ್ಧ ಮುಂದಿನ ವಿಚಾರಣೆಗೆ ಅನುಮತಿ ನೀಡುವುದು ಕಾನೂನು ಪ್ರಕ್ರಿಯೆ ದುರ್ಬಳಕೆಯಾಗಲಿದೆ ಮತ್ತು ಅನ್ಯಾಯಕ್ಕೆ ಕಾರಣವಾಗಲಿದೆ ಎಂದು ನ್ಯಾಯಪೀಠ ಆದೇಶದಲ್ಲಿ ಹೇಳಿದೆ.



ವೇಶ್ಯಾವಾಟಿಕೆ ಸಂತ್ರಸ್ತೆಯನ್ನು ಶಿಕ್ಷಿಸಬೇಕು ಎಂದು ಮಾನವ ಕಳ್ಳ ಸಾಗಣೆ ಕಾಯ್ದೆಯಡಿ ಎಲ್ಲಿಯೂ ತಿಳಿಸಿಲ್ಲ.

ಹೀಗಾಗಿ, ವೇಶ್ಯಾವಾಟಿಕೆ ಸಂತ್ರಸ್ತೆಯನ್ನು ಅಭಿಯೋಜನೆಗೆ ಗುರಿಪಡಿಸುವುದು ಕಾನೂನು ಪ್ರಕ್ರಿಯೆಯ ದುರುಪಯೋಗ ಎಂದು ಪ್ರಕರಣವೊಂದರಲ್ಲಿ ಬಾಂಬೆ ಹೈಕೋರ್ಟ್ ಆದೇಶಿಸಿತ್ತು. ವೇಶ್ಯಾವಾಟಿಕೆ ನಿರ್ಮೂಲನೆ ಮಾಡುವುದು ಮಾನವ ಕಳ್ಳ ಸಾಗಣೆಯ ಕಾಯ್ದೆಯ ನಿಬಂಧನೆಗಳ ಉದ್ದೇಶವಲ್ಲ. ವಾಣಿಜ್ಯ ಉದ್ದೇಶದಿಂದ ಲೈಂಗಿಕ ಶೋಷಣೆ ನಡೆಸಿ ಹಣ ಸಂಪಾದಿಸುವುದು ಮತ್ತು ಅದರ ಮೇಲೆ ಜೀವನ ಮಾಡುವುದು ಶಿಕ್ಷಾರ್ಹವಾಗಿದೆ.

ಇಂತಹ ಅಪರಾಧ ಕೃತ್ಯ ಎಸಗಿದವರ ವಿರುದ್ಧ ಕಾಯ್ದೆಯಡಿ ಶಿಕ್ಷೆ ವಿಧಿಸಬಹುದಾಗಿದೆ ಎಂದು ಆದೇಶದಲ್ಲಿ ಪೀಠ ಉಲ್ಲೇಖಿಸಿದೆ.

ಪ್ರಕರಣದ ಹಿನ್ನೆಲೆ: ವೇಶ್ಯಾವಾಟಿಕೆಯಲ್ಲಿ ತೊಡಗಿಸಲು ಕೆಲ ಹುಡುಗಿಯರನ್ನು ಉಡುಪಿಯಿಂದ ಗೋವಾಗೆ ವಾಹನದಲ್ಲಿ ಅಕ್ರಮವಾಗಿ ಕರೆದೊಯ್ಯುತ್ತಿದ್ದ ಬಗ್ಗೆ ಬಂದ ಮಾಹಿತಿ ಆಧರಿಸಿ 2013ರ ಜ.13ರಂದು ಕುಂದಾಪುರ ಠಾಣಾ ಪೊಲೀಸರು ಕಾರ್ಯಾಚರಣೆ ನಡೆಸಿದ್ದರು. ಈ ವೇಳೆ ಅರ್ಜಿದಾರೆ ಸೇರಿದಂತೆ ಇತರೆ ಹುಡುಗಿಯರನ್ನು ತಲಾ 10 ಸಾವಿರ ರೂ. ಪಾವತಿಸಿ ವೇಶ್ಯಾವಾಟಿಕೆಲ್ಲಿ ತೊಡಗಿಸಲು ಕರೆದುಕೊಂಡು ಹೋಗುತ್ತಿರುವುದು ತಿಳಿದು ಬಂದಿತ್ತು. ಪೊಲೀಸರು ತನಿಖೆ ಪೂರ್ಣಗೊಳಿಸಿ ವಿಚಾರಣಾ ನ್ಯಾಯಾಲಯಕ್ಕೆ ದೋಷಾರೋಪ ಪಟ್ಟಿ ಸಲ್ಲಿಸಿದ್ದರು.

ಪ್ರಕರಣದಲ್ಲಿ ಅರ್ಜಿದಾರೆಯನ್ನು 8ನೇ ಆರೋಪಿಯನ್ನಾಗಿ ಮಾಡಲಾಗಿತ್ತು. ಮಾನವ ಕಳ್ಳಸಾಗಣೆ ತಡೆ ಕಾಯ್ದೆ–1956ರ ಸೆಕ್ಷನ್ 5 ಅಡಿಯಲ್ಲಿ ಅರ್ಜಿದಾರೆಯ ವಿರುದ್ಧ ಕುಂದಾಪುರ ನ್ಯಾಯಾಲಯ ಕಾಗ್ನಿಜೆನ್ಸ್ ತೆಗೆದುಕೊಂಡಿತ್ತು. ಇದರಿಂದ ತನ್ನ ವಿರುದ್ಧದ ಪ್ರಕರಣ ರದ್ದತಿ ಕೋರಿ ಮಹಿಳೆ ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದರು.

# ಯುವ ಪೀಳಿಗೆಗೆ ಮಾದರಿಯಾಗಬೇಕು ಎಂದು ಸಮಾಜ ಸೇವಕ ಆರ್‌ಟಿಓ ಮಲ್ಲಿಕಾರ್ಜುನ್



ಕೆ.ಆರ್.ಪೇಟೆ: ನಾಡ ಪ್ರಭು ಕೆಂಪೇಗೌಡರು ಬೆಂಗಳೂರನ್ನು ಕಟ್ಟಿದ ಮಹಾನ್ ಪುರುಷರಾಗಿದ್ದು ಅವರ ವ್ಯಕ್ತಿತ್ವ ಹಾಗೂ ಛಲ ಯುವ ಪೀಳಿಗೆಗೆ ಮಾದರಿಯಾಗಬೇಕು ಎಂದು ಸಮಾಜ ಸೇವಕ ಆರ್‌ಟಿಓ ಮಲ್ಲಿಕಾರ್ಜುನ್ ಹೇಳಿದರು.

ತಾಲ್ಲೂಕು ಆರ್.ಟಿ.ಓ ಮಲ್ಲಿಕಾರ್ಜುನ್ ಅಭಿಮಾನಿಗಳ ಬಳಗದ ವತಿಯಿಂದ ನಾಡಪ್ರಭು ಕೆಂಪೇಗೌಡರ 515ನೇ ಜಯಂತಿಯ ಪ್ರಯುಕ್ತ ತಾಲೂಕಿನ ಸರ್ಕಾರಿ ಪ್ರಥಮಿಕ ಮತ್ತು ಪ್ರೌಢಶಾಲೆಗಳಿಗೆ ನಾಡಪ್ರಭು ಕೆಂಪೇಗೌಡ ರವರ ಭಾವಚಿತ್ರವನ್ನು ಪಟ್ಟಣದಲ್ಲಿರುವ ತಮ್ಮ ಕಚೇರಿಯಲ್ಲಿ ಶಾಲಾ ಮುಖ್ಯ ಶಿಕ್ಷಕರ ಮೂಲಕ ನೀಡಿ ಮಾತನಾಡಿದರು.ವಿದ್ಯಾರ್ಥಿಗಳು ಇತಿಹಾಸವನ್ನು ತಿಳಿದುಕೊಳ್ಳಬೇಕು ಇದರಿಂದ ಅವರ ಜ್ಞಾನ ವೃದ್ಧಿಯಾಗುತ್ತದೆ. ಯುವಜನರಿಗೆ ಕೆಂಪೇಗೌಡರಂಥ ವ್ಯಕ್ತಿತ್ವವು ಅವರ ಜೀವನಕ್ಕೆ ಸ್ಫೂರ್ತಿ ನೀಡುತ್ತದೆ.

ನಾಡಿಗಾಗಿ ಸೇವೆ ಮಾಡಿ, ನಾಡನ್ನು ಕಟ್ಟಿ ಬೆಳೆಸಿದ ದೊರೆ.ಬೆಂಗಳೂರಿನಲ್ಲಿ ಇರುವ ಕೆರೆಗಳು ಇವರ ಕಾಲದಲ್ಲಿ ನಿರ್ಮಾಣವಾಗಿ ಕೃಷಿಗೆ, ಕುಡಿಯುವ ನೀರಿಗೆ ಅನುಕೂಲವಾಗುವಂತೆ ಮಾಡಿದರು. ನಾಲ್ಕು ದಿಕ್ಕಿನಲ್ಲಿ ಗಡಿ ಗುರುತು ಮಾಡಿ ವೃತ್ತಿಗೆ ಸಂಬಂಧಿಸಿದಂತಹ ಪಟ್ಟಣಗಳನ್ನು ನಿರ್ಮಾಣ ಮಾಡಿದರು. ಕೆಂಪೇಗೌಡರ ದೂರದೃಷ್ಟಿಯಿಂದ ಸಾಕಷ್ಟು ಸುಧಾರಣೆಗಳು ಕಾಣಸಿಗುತ್ತವೆ. ಕೆಂಪೇಗೌಡರ ವ್ಯಕ್ತಿತ್ವವು ಈಗಿನ ಯುವಕರಿಗೆ ಮತ್ತು ಸಾರ್ವಜನಿಕರಿಗೆ ಆದರ್ಶಪ್ರಾಯವಾಗಿದೆ ಎಂದರು.

ಬಳಿಕ ಮಾತನಾಡಿದ ತಾಲ್ಲೂಕು ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಪದ್ಮೇಶ ಸಮಾಜ ಸೇವಕ ಆರ್‌ಟಿಓ ಮಲ್ಲಿಕಾರ್ಜುನ್ ರವರು ತಾಲೂಕಿನಲ್ಲಿ ಸಕ್ರಿಯ ಸಮಾಜ ಸೇವೆಯ ಜೊತೆಯಲ್ಲಿ ಸುಭದ್ರ ದೇಶ ಮತ್ತು ರಾಜ್ಯಕ್ಕಾಗಿ ಶ್ರಮಿಸಿದ ಮಹನೀಯರ ಆದರ್ಶಗಳನ್ನು ವಿದ್ಯಾರ್ಥಿಗಳ ಮನಸ್ಸಿನಲ್ಲಿ ಶಾಶ್ವತವಾಗಿ ನೆಲಸಬೇಕು ಎಂಬ ದೂರದೃಷ್ಟಿಯಿಂದ ಆರ್‌ಟಿಓ ಮಲ್ಲಿಕಾರ್ಜುನ್ ರವರ ಅಭಿಮಾನಿ ಬಳಗದ ವತಿಯಿಂದ ತಾಲ್ಲೂಕಿನ ಪ್ರತಿ ಸರ್ಕಾರಿ ಶಾಲೆಗಳಿಗೆ ಮಹನೀಯರ ಜಯಂತಿ ಅಂಗವಾಗಿ ಅವರ ಭಾವಚಿತ್ರ ನೀಡುತ್ತಿರುವುದು ನಿಜಕ್ಕೂ ಶ್ಲಾಘನೀಯ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಉಪಾಧ್ಯಕ್ಷ ಎಲ್.ಎಸ್.ಧರ್ಮಪ್ಪ, ತಾಲ್ಲೂಕು ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಸಂಘಟನಾ ಕಾರ್ಯದರ್ಶಿ ಜಿ.ಎಸ್.ಮಂಜು, ತಾಲ್ಲೂಕು ಎಸ್ಸಿ.ಎಸ್ಟಿ ನೌಕರರ ಸಂಘದ ಅಧ್ಯಕ್ಷ ಹಳಿಯೂರು ಯೋಗೇಶ್, ತಾಲ್ಲೂಕು ಪ್ರತಿಭಾ ಪರಿಷತ್ ಅಧ್ಯಕ್ಷ ಉದೇಶ್ ಗೌಡ, ತೆಂಡೇಕೆರೆ ಪ್ರೌಢಶಾಲಾ ಮುಖ್ಯ ಶಿಕ್ಷಕ ಮುತ್ತುರಾಜು, ನಿವೃತ್ತ ಉಪತಹಶೀಲ್ದಾರ್ ಗೋಪಾಲಕೃಷ್ಣ, ಶಿಕ್ಷಕರಾದ ರಂಗಸ್ವಾಮಿ, ಮಹೇಶ್, ಹನುಮಂತಶೆಟ್ಟಿ, ಮಲ್ಲಿಕಾರ್ಜುನ್ ಅಭಿಮಾನಿ ಬಳಗದ ಅಧ್ಯಕ್ಷ ಗಂಜಿಗೆರೆ ಮಹೇಶ್, ಹೊಸಹೊಳಲು ವಿಜಯಣ್ಣ ಸೇರಿದಂತೆ ಉಪಸ್ಥಿತರಿದ್ದರು.

ಸುದ್ದಿಯೊಂದಿಗೆ ಮನು ಮಾಕವಳ್ಳಿ ಕೆಆರ್‌ಪೇಟೆ

# ಹಳ್ಳಕ್ಕಿಳಿದ ಆಂಬುಲೆನ್ಸ್: ಮೂವರಿಗೆ ಪೆಟ್ಟು




ಹಾಸನ: ರೋಗಿಯನ್ನು ಆಸ್ಪತ್ರೆಗೆ ಕರೆ ತರುತ್ತಿದ್ದ 108 ಅಂಬ್ಯುಲೆನ್ಸ್ ನಗರ ಹೊರ ವಲಯದ ಶ್ರೀರಾಮನಗರ ಬಳಿ ಟೈಯರ್ ಬ್ಲಾಸ್ಟ್ ಆಗಿ ಹಳ್ಳಕ್ಕೆ ಇಳಿದ ಪರಿಣಾಮ ರೋಗಿ ಸೇರಿ ಮೂವರಿಗೆ ಸಣ್ಣಪುಟ್ಟ ಗಾಯಗಳಾಗಿವೆ.

ಅರಕಲಗೂಡಿನಿಂದ ಹಾಸನಕ್ಕೆ ರೋಗಿಯನ್ನು ಕರೆ ತರುತ್ತಿದ್ದ ವೇಳೆ ಅಂಬುಲೆನ್ಸ್ನ ಚಕ್ರವೊಂದು ಸಿಡಿದು ವಾಹನ ಚಾಲಕ ನಿಯಂತ್ರಣಕ್ಕೆ ಬಾರದಾಯಿತು. ಪರಿಣಾಮ ಆಂಬುಲೆನ್ಸ್ ರಸ್ತೆ ಪಕ್ಕದ ಹಳ್ಳಕ್ಕೆ ವಾಲಿ ನಿಂತಿತು. ಘಟನೆಯಿಂದ ಒಳಗಿದ್ದ ರೋಗಿ ಸೇರಿ ಮೂವರಿಗೆ ಪೆಟ್ಟಾಗಿವೆ.

ಕೂಡಲೇ ಬೇರೆ ಅಂಬ್ಯುಲೆನ್ಸ್ನಲ್ಲಿ ರೋಗಿಯನ್ನು ಆಸ್ಪತ್ರೆಗೆ ರವಾನೆ ಮಾಡಲಾಯಿತು. ನಗರ ಸಂಚಾರ ಠಾಣೆ ಪೊಲೀಸರು ಸ್ಥಳ ಪರಿಶೀಲನೆ ನಡೆಸಿದ್ದಾರೆ.

# ಅಕ್ರಮ ಮಣ್ಣು ಗಣಿಗಾರಿಕೆ ನಿಲ್ಲಿಸಲು ಒತ್ತಾಯಿಸಿ ಪ್ರತಿಭಟನೆ



*ಮದ್ದೂರು ತಾಲೂಕಿನ ಕೆರೆಗಳಲ್ಲಿ ನಡೆಯುತ್ತಿರುವ ಅಕ್ರಮ ಮಣ್ಣುಗಣಿ ಗಾರಿಕೆಯನ್ನು ನಿಲ್ಲಿಸಬೇಕು ಹಾಗೂ ಕೆರೆಗಳನ್ನು ಸರಂರಕ್ಷಣೆ ಮಾಡುವಂತೆ ಒತ್ತಾಯಿಸಿ ಕಸ್ತೂರಿ ಕರ್ನಾಟಕ ಜನಪರ ವೇದಿಕೆಯ ವತಿಯಂದ ಪಟ್ಟಣದ ಕಾವೇರಿ ನೀರಾವರಿ ನಿಗಮದ ಕಚೇರಿ ಆವರಣದಲ್ಲಿ ನೀರಾವರಿ ನಿಗಮದ ಸಹಾಯಕ ಕಾರ್ಯಪಾಲಕ ಅಭಿಯಂತರ ಎಚ್.ಎನ್.ನಾಗರಾಜು ಅವರಿಗೆ ಮನವಿ ಪತ್ರ ಸಲ್ಲಿಸಲಾಯಿತು. ವಿ.ಡಿ.ಶ್ರೀನಿವಾಸ್, ವಿ.ಎನ್.ಗಿರೀಶ್, ವಿ.ಎಚ್.ಶಿವಲಿಂಗಯ್ಯ, ವೆಂಕಟೇಶ್, ದೊರೆ, ಎಂ.ವೀರಪ್ಪ, ರಾಮಣ್ಣ ಇದ್ದರು.*

ಮದ್ದೂರು: ಪಟ್ಟಣದ ಪ್ರವಾಸಿ ಮಂದಿರದ ಬಳಿ ಅಕ್ರಮವಾಗಿ ಮಣ್ಣು ಸಾಗಿಸುತ್ತಿದ್ದ ಲಾರಿಯನ್ನು ತಡೆದ ಕಸ್ತೂರಿ ಕರ್ನಾಟಕ ಜನಪರ ವೇದಿಕೆಯ ಕಾರ್ಯಕರ್ತರು ಪೊಲೀಸರಿಗೆ ದೂರವಾಣಿ ಮೂಲಕ ವಿಷಯ ತಿಳಿಸಿದರು. ಸ್ಥಳಕ್ಕೆ ಆಗಮಿಸಿದ ಸಂಚಾರ ಪಿಎಸ್ಐ ಮಹೇಶ್ ಅವರು ಪ್ರತಿಭಟನಕಾರರಿಂದ ಮಾಹಿತಿ ಪಡೆದ ನಂತರ ಲಾರಿ ಮತ್ತು ಚಾಲಕನ್ನ ವಶಕ್ಕೆ ಪಡೆದು ವಿಚಾರಣೆ ನಡೆಸುವುದಾಗಿ ತಿಳಿಸಿದರು.

ಮದ್ದೂರು: ತಾಲೂಕಿನ ಕೆರೆಗಳಲ್ಲಿ ನಡೆಯುತ್ತಿರುವ ಅಕ್ರಮ ಮಣ್ಣು ಗಣಿಗಾರಿಕೆಯನ್ನು ನಿಲ್ಲಿಸಬೇಕು ಹಾಗೂ ಕೆರೆಗಳನ್ನು ಸರಂರಕ್ಷಣೆ ಮಾಡುವಂತೆ ಒತ್ತಾಯಿಸಿ

ಕಸ್ತೂರಿ ಕರ್ನಾಟಕ ಜನಪರ ವೇದಿಕೆಯ ವತಿಯಿಂದ ಪಟ್ಟಣದ ಕಾವೇರಿ ನೀರಾವರಿ ನಿಗಮದ ಕಚೇರಿ ಎದುರು ಪ್ರತಿಭಟನೆ ಮಾಡಲಾಯಿತು.

ಕೆರೆಗಳಲ್ಲಿ ಅಕ್ರಮವಾಗಿ ಮತ್ತು ಅವೈಜ್ಞಾನಿಕವಾಗಿ ಮಣ್ಣುಗಾರಿಕೆ ಮಾಡುತ್ತಿದ್ದರು ಕ್ರಮ ಕೈಗೊಳ್ಳದ ಅಧಿಕಾರಿಗಳು ಹಾಗೂ ಜನಪ್ರತಿನಿಧಿಗಳ ವಿರುದ್ಧ ಘೋಷಣೆಗಳನ್ನು ಕೂಗಿ ಆಕ್ರೋಶ ವ್ಯಕ್ತಪಡಿಸಿದರು.

ವೇದಿಕೆಯ ಜಿಲ್ಲಾಧ್ಯಕ್ಷ ವಳಗೆರಹಳ್ಳಿ ವಿ.ಸಿ.ಉಮಾಶಂಕರ ಮಾತನಾಡಿ, ತಾಲೂಕಿನಲ್ಲಿ ಹಲವು ಕೆರೆಗಳಲ್ಲಿ ಸರ್ಕಾರದ ಪೂರ್ವಾನುಮತಿಯನ್ನು ಪಡೆಯದೆ ಅವೈಜ್ಞಾನಿಕವಾಗಿ ಮತ್ತು ಅಕ್ರಮವಾಗಿ ಬೃಹತ್ ಗಾತ್ರದ ವಾಹನಗಳಲ್ಲಿ ಮಣ್ಣುಗಣಿಗಾರಿಕೆ ಮಾಡಲಾಗುತ್ತಿದ್ದರು ಅಧಿಕಾರಿಗಳು ಯಾವುದೇ ಕ್ರಮ ಕೈಗೊಳ್ಳುತ್ತಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಹಣ ಮಾಡುವ ದುರುದ್ದೇಶದಿಂದ ಕೆರೆಗಳ ಭೂ ಗರ್ಭವನ್ನು ಅಗೆದು ಪ್ರಪಾತ ಸೃಷ್ಟಿ ಮಾಡುತ್ತಿದ್ದಾರೆ. ಇದರಿಂದ ಮುಂದಿನ ದಿನಗಳಲ್ಲಿ ಅಪಾಯಗಳು ಸಂಭವಿಸುವ ಸಾಧ್ಯತೆ ದಟ್ಟವಾಗಿದೆ. ಬೃಹತ್ ಗಾತ್ರದ ವಾಹನಗಳಿಂದ ಮಣ್ಣು ತುಂಬಿ ಸಾಗಿಸುತ್ತಿರುವುದರಿಂದ ರಸ್ತೆಗಳು ಹಾಳಾಗುತ್ತಿವೆ ಹಾಗೂ ಪಟ್ಟಣದ ಹಾಗೂ ಗ್ರಾಮಾಂತರದ ಪ್ರದೇಶಗಳಲ್ಲಿ ಭಾರಿ ವಾಹನಗಳ ಹೋದಾಗ ದೂಳುಮಯವಾಗಿ ಅನೈರ್ಮಲ್ಯ ವಾತಾವರಣ ಉಂಟಾಗುವ ಮೂಲಕ ಜನರ ಆರೋಗ್ಯದ ಮೇಲೂ ದುಷ್ಪಪರಿಣಾಮ ಬೀರುತ್ತಿದೆ ಎಂದು ಕಳವಳ ವ್ಯಕ್ತಪಡಿಸಿದರು. ಈ ಕೂಡಲೆ ಅಕ್ರಮ ಮಣ್ಣು ಗಣಿಗಾರಿಕೆಯನ್ನು ನಿಲ್ಲಿಸಬೇಕು. ಇಲ್ಲದಿದ್ದರೆ ಮುಂದಿನ ದಿನಗಳಲ್ಲಿ ವೇದಿಕೆ ವತಿಯಿಂದ ಉಗ್ರ ಹೋರಾಟ ರೂಪಿಸಲಾಗುವುದು ಎಂದು ಎಚ್ಚರಿಕೆ ನೀಡಿದರು.

ಮನವಿ ಸ್ವೀಕರಿಸಿ ಕಾವೇರಿ ನೀರಾವರಿ ನಿಗಮದ ಸಹಾಯಕ ಕಾರ್ಯಪಾಲಕ ಅಭಿಯಂತರ ಎಚ್.ಎನ್.ನಾಗರಾಜು ಮಾತನಾಡಿ, ಅಕ್ರಮ ಮಣ್ಣುಗಾರಿಕೆ ನಡೆಯುತ್ತಿರುವ ಬಗ್ಗೆ ಈಗಾಗಲೇ 4 ದೂರುಗಳನ್ನು ಪೊಲೀಸ್ ಠಾಣೆಗೆ ನೀಡಲಾಗಿದೆ. ನಗರಕರೆ, ಆಲಂಶೆಟ್ಟಿಹಳ್ಳಿ, ವಳಗೆರೆಹಳ್ಳಿ ಹಾಗೂ ಆತಗೂರು ಸೇರಿದಂತೆ ಇತರ ಗ್ರಾಮಗಳಲ್ಲಿ ಅಕ್ರಮ ಮಣ್ಣು ಗಣಿಗಾರಿಕೆ ನಡೆಯುತ್ತಿರುವುದು ಕಂಡು ಬಂದಿದ್ದು, ತಪ್ಪಿತಸ್ಥರ ವಿರುದ್ಧ ನಿರ್ಧಾಕ್ಷಿಣ್ಯ ಕ್ರಮ ಕೈಗೊಳ್ಳುವಂತೆ ತಹಶೀಲ್ದಾರ್, ಜಿಲ್ಲಾಧಿಕಾರಿ, ಕಾವೇರಿ ನೀರಾವರಿ ನಿಗಮದ ಇಲಾಖೆಯ ಉನ್ನತ ಅಧಿಕಾರಿಗಳಿ ಪತ್ರ ಬರೆಯಲಾಗಿದೆ ಎಂದು ತಿಳಿಸಿದ ನಂತರ ಪ್ರತಿಭಟನೆ ಹಿಂಪಡೆಯಲಾಯಿತು.

ಪ್ರತಿಭಟನೆಯಲ್ಲಿ ಮಾಜಿ ಯೋಧ ವಿ.ಡಿ.ಶ್ರೀನಿವಾಸ್, ಮುಖಂಡರಾದ ವಿ.ಎನ್.ಗಿರೀಶ್, ವಿ.ಎಚ್.ಶಿವಲಿಂಗಯ್ಯ, ವೆಂಕಟೇಶ್, ದೊರೆ, ಎಂ.ವೀರಪ್ಪ, ರಾಮಣ್ಣ ಸೇರಿದಂತೆ ಇತರರು ಇದ್ದರು.

# ಅಂಗನವಾಡಿ ಕಾರ್ಯಕರ್ತೆಯರ ಉದ್ಯೋಗ ಖಾಯಂಗೊಳಿಸಲು ನನ್ನದು ಒತ್ತಾಯವಿದೆ ಶಾಸಕ ಬೇಲೂರು ಗೋಪಾಲಕೃಷ್ಣ ಬೆಳೂರು

ಅನೇಕ ಯೋಜನೆಗಳನ್ನು ಸರ್ಕಾರದ ಕಾರ್ಯಕ್ರಮ ಗನ್ನು ಮನೆ ಮನೆಗೆ ತಲುಪಿಸುವಲ್ಲಿ ನಿರಂತರವಾಗಿ ತೊಡಗಿಕೊಂಡಿರುವ ಅಂಗನವಾಡಿ ಕಾರ್ಯಕರ್ತೆಯರ ಕೆಲಸದ ಕುರಿತು ಸರಕಾರಕ್ಕೆ ಗೌರವವಿದೆ. ಸರಕಾರದ ಪ್ರತಿನಿಧಿಯಾಗಿ ನಾನು ನಿಮ್ಮನ್ನು ಖಾಯಂಗೊಳಿಸಬೇಕು ಎನ್ನುವ ಒತ್ತಾಯಕ್ಕೆ ಬದ್ಧನಿದ್ದೇನೆ ಎಂದು ಶಾಸಕ ಗೋಪಾಲಕೃಷ್ಣ ಬೇಳೂರು ಹೇಳಿದರು. ಅವರು

ಪಟ್ಟಣದ ಗಾಂಧಿ ಮೈದಾನದದಲ್ಲಿ ಬುಧವಾರ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ವತಿಯಿಂದ ಏರ್ಪಡಿಸಿದ್ದ ಅಂಗನವಾಡಿ ಕಾರ್ಯಕರ್ತೆಯರಿಗೆ ಸ್ಮಾರ್ಟ್ ಫೋನ್ ವಿತರಣಾ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತಾನಾಡಿದರು. ತಾಲೂಕಿನ 360 ಅಂಗನವಾಡಿ ಕಾರ್ಯಕರ್ತೆಯರಿಗೆ ಸ್ಮಾರ್ಟ್ ಫೋನ್ ವಿತರಣೆ ಮಾಡಿದರು.



ಕಡಿಮೆ ಸಂಬಳಕ್ಕೆ ಹೆಚ್ಚು ಕೆಲಸ ಮಾಡುತ್ತಿರುವ ನಿಮ್ಮ ನ್ಯಾಯಯುತವಾದ ಬೇಡಿಕೆಯನ್ನು ರಾಜ್ಯ ಮತ್ತು ಕೇಂದ್ರ ಸರಕಾರ ಒಟ್ಟಾಗಿ ಪರಿಹರಿಸುವುದು ಕಷ್ಟದ ಕೆಲಸ ಅಲ್ಲ. ಈ ಕುರಿತು ಸರಕಾರದ ಗಮನಸೆಳೆಯುವ ಕೆಲಸವನ್ನು ಸದನದಲ್ಲಿ ಮಾಡುತ್ತೇನೆ. ಅನೇಕ ವರ್ಷಗಳಿಂದ ನಿಮ್ಮ ಹೋರಾಟ ನಡೆಯುತ್ತಲೇ ಬಂದಿರುವುದು ನನ್ನ ಗಮನದಲ್ಲಿದೆ. ಗಟ್ಟಿ ಧ್ವನಿಯ ಸರಕಾರ ನಮ್ಮದಿದ್ದು, ನಿಮ್ಮ ಬೇಡಿಕೆಗಳನ್ನು ಪೂರೈಸುವ ನಿಟ್ಟಿನಲ್ಲಿ ಶ್ರಮಿಸುತ್ತೇನೆ ಎಂದ ಅವರು, ಈಗಾಗಲೆ ಅಂಗನವಾಡಿಯಲ್ಲಿಯೇ ಎಲ್‌ಕೆಜಿ ಮತ್ತು ಯುಕೆಜಿ ಆರಂಭಕ್ಕೆ ಸಿದ್ಧತೆ ನಡೆದಿದೆ. ಇದಕ್ಕೂ ನಿಮ್ಮೆಲ್ಲರ ಸಹಕಾರ ಬೇಕು ಎಂದರು.

ಉಪವಿಭಾಗಾಧಿಕಾರಿ ಆರ್. ಯತೀಶ್, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ತಾಲೂಕು ಅಧಿಕಾರಿ ಗಂಗುಬಾಯಿ, ಇಒ ಗುರುಕೃಷ್ಣ ಶಣೈ,

ತಾಲೂಕು ವೈದ್ಯಾಧಿಕಾರಿ ಭರತ್, ಪರಿಸರ ಅಭಿಯಂತರ ಮದನ್, ಮೊಹಮ್ಮದ್ ಹನೀಫ್, ನಗರಸಭೆ ಸದಸ್ಯರಾದ ಉಮೇಶ್, ಮಧುಮಾಲತಿ, ಗಣಪತಿ ಮಂಡಗಳಲೆ, ಪ್ರಮುಖರಾದ ಸುರೇಶ್ ಬಾಬು, ಚಂದ್ರಪ್ಪ, ಮೊದಲಾದವರು ಇದ್ದರು...

ಮುಂಜಾನೆ ವಾರ್ತೆ
ಕನ್ನಡ ದಿನಪತ್ರಿಕೆ
ಇ-ಪೇಪರ್: www.munjanevarth.com
ಬುಧವಾರ 26 ಜೂನ್ 2024
WEDNESDAY 26 June 2024

# ಹಾಸನ ಜಿಲ್ಲೆಯ ಮತದಾರರ ಋಣವನ್ನು ಜಾತ್ಯತೀತವಾಗಿ ಮತ್ತು ಪಕ್ಷಾತೀತವಾಗಿ ತೀರಿಸಲು ಸದಾ ಬದ್ಧನಾಗಿರುತ್ತೇನೆ

*ಕೆಪಿಸಿಸಿ ಸದಸ್ಯರಾದ ಅನುಪಮ ಮಹೇಶ್ ಮಾತನಾಡಿ ಮತದಾರರ ಋಣವನ್ನು ತೀರಿಸುವುದೇ ನಮ್ಮ ಪ್ರಮುಖ ಉದ್ದೇಶವಾಗಿದ್ದು ನನ್ನ ನೆಚ್ಚಿನ ಮಗನನ್ನು ಲೋಕಸಭೆಗೆ ಆರಿಸಿ ಕಳುಹಿಸಿದ ನಿಮಗೆ ಎಷ್ಟು ಕೃತಜ್ಞತೆ ಅರ್ಪಿಸಿದರು ಸಾಲದು. ಮತದಾರರ ಋಣ ನಮ್ಮ ಮೇಲಿದೆ.*



ಹೊಳೆನರಸೀಪುರ ನನ್ನ ಉಸಿರು ಇರುವವರೆಗೂ ನಮ್ಮ ಹಾಸನ ಜಿಲ್ಲೆಯ ಮತದಾರರ ಋಣವನ್ನು ಜಾತ್ಯತೀತವಾಗಿ ಮತ್ತು ಪಕ್ಷಾತೀತವಾಗಿ ತೀರಿಸಲು ಸದಾ ಬದ್ಧನಾಗಿರುತ್ತೇನೆ. ಎಂದು ಲೋಕಸಭಾ ಸದಸ್ಯರಾದ ಶ್ರೇಯಸ್ ಎಂ ಪಟೇಲ್ ಅವರು ತಿಳಿಸಿದರು. ಪಟ್ಟಣದ ಎಸ್ ಜಿ ಅನುಪಮ ಅವರ ಅಕ್ಕಿ ಗಿರಣಿ ಆವರಣದಲ್ಲಿ ಕಾಂಗ್ರೆಸ್ ಪಕ್ಷದ ವತಿಯಿಂದ ಆಯೋಜಿಸಿದ್ದ ಕಾಂಗ್ರೆಸ್ ಕಾರ್ಯಕರ್ತರ ಸಭೆಗೆ ಆಗಮಿಸಿ ಗಿಡಕ್ಕೆ ನೀರೆಯು ವುದರ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು. ಎಲ್ಲ ಇಲಾಖ ಅಧಿಕಾರಿಗಳನ್ನು ವಿಶ್ವಾಸಕ್ಕೆ ತೆಗೆದುಕೊಳ್ಳುವುದರ ಮೂಲಕ ಜನಸಾಮಾನ್ಯರ ಒಡನಾಡಿಯಾಗಿ ನೋವುಗಳಿಗೆ ಪ್ರಾಮಾಣಿಕವಾಗಿ ಸ್ಪಂದಿಸಲು ಸದಾ ಸಿದ್ಧನಿದ್ದೇನೆ. ಯಾವುದೇ ಕಾರಣಕ್ಕೂ ಮತದಾರ ಬಂಧುಗಳು ದೃತಿಗೆಡಬೇಕಾದ ಅಗತ್ಯವಿಲ್ಲ. ನಗರ ಮತ್ತು ಗ್ರಾಮಗಳ ಅಭಿವೃದ್ಧಿಗೆ ಹಂತ ಹಂತವಾಗಿ ನಮ್ಮ ಕಾಂಗ್ರೆಸ್ ನೇತೃತ್ವದ ರಾಜ್ಯ ಸರ್ಕಾರದ ಗಮನಸೆಳೆದು ಹಾಗೂ ಕೇಂದ್ರ ಸರ್ಕಾರದಿಂದ ಸಂಸದರಿಗೆ ನೀಡುವ ಅನುದಾನವನ್ನು ವ್ಯವಸ್ಥಿತವಾಗಿ ಸದ್ಬಳಕೆ ಮಾಡಿಕೊಂಡು ಜಿಲ್ಲೆಯ ಸಮಗ್ರ ಅಭಿವೃದ್ಧಿಗೆ ಶ್ರಮಿಸಲು ಕಾಯ ವಾಚ ಮನಸ ಸ್ಪಂದಿಸಲಿದ್ದೇನೆ ಎಂದರು.

ಕೆಪಿಸಿಸಿ ಸದಸ್ಯರಾದ ಅನುಪಮ ಮಹೇಶ್ ಮಾತನಾಡಿ ಮತದಾರರ ಋಣವನ್ನು ತೀರಿಸುವುದೇ ನಮ್ಮ ಪ್ರಮುಖ ಉದ್ದೇಶವಾಗಿದ್ದು ನನ್ನ ನೆಚ್ಚಿನ ಮಗನನ್ನು ಲೋಕಸಭೆಗೆ ಆರಿಸಿ ಕಳುಹಿಸಿದ ನಿಮಗೆ ಎಷ್ಟು ಕೃತಜ್ಞತೆ ಅರ್ಪಿಸಿದರು ಸಾಲದು. ಮತದಾರರ ಋಣ ನಮ್ಮ ಮೇಲಿದೆ. ಎಂದರು. ಸಭೆಯಲ್ಲಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರುಗಳಾದ ಎಚ್ ಟಿ ಲಕ್ಷ್ಮಣ, ಜಿಎಸ್ ವಿಶ್ವನಾಥ್, ಮಾಜಿ ಅಧ್ಯಕ್ಷರುಗಳಾದ ವಿಕೆ ನಾರಾಯಣ್, ಎಚ್ ಕೆ ಹರೀಶ್, ಮುಖಂಡರುಗಳಾದ ಥಾಮಸ್, ಎಂ ಸೋಮಶೇಖರ್, ಬಿ ಪಿ ಮಂಜೇಗೌಡ, ಎಲ್ ಡಿ ಬಸವರಾಜು, ಶೃತಿ, ಸುರೇಶ್, ಕುಮಾರ್, ವಿಕ್ಕಿ, ಇತರರು ಮಾತನಾಡಿ ನೂತನ ಸಂಸದರಿಗೆ ಮತ ನೀಡಿ ಆಶೀರ್ವದಿಸಿದ ಎಲ್ಲ ಮತದಾರ ಬಂಧುಗಳಿಗೆ ಕೃತಜ್ಞತೆ ಅರ್ಪಿಸಿದರು. ವೇದಿಕೆಯಲ್ಲಿ ಹಲವಾರು ಗಣ್ಯರು ಸೇರಿದಂತೆ ವೇದಿಕೆ ಮುಂಭಾಗದಲ್ಲಿ ಸಹಸ್ರಾರು ಕಾರ್ಯಕರ್ತರು ಮತ್ತು ಮುಖಂಡರುಗಳು ಪಾಲ್ಗೊಂಡು ಕಾರ್ಯಕ್ರಮದ ಯಶಸ್ವಿಗೆ ಸಾಕ್ಷಿಯಾದರು.

## ಸಹಕಾರಿ ಕ್ಷೇತ್ರದಲ್ಲಿ ಒಟ್ಟಾಗಿ ಶ್ರಮಿಸಿದಾಗ ಮಾತ್ರ ಸಹಕಾರಿ ರಂಗ ಪ್ರಗತಿಯಾಗಲು ಸಾಧ್ಯ

ಕೆ.ಆರ್.ಪೇಟೆ: ಸಹಕಾರಿ ಕ್ಷೇತ್ರದಲ್ಲಿ ಒಟ್ಟಾಗಿ ಶ್ರಮಿಸಿದಾಗ ಮಾತ್ರ ಸಹಕಾರಿ ರಂಗ ಪ್ರಗತಿಯಾಗಲು ಸಾಧ್ಯ ಎಂದು ಮನ್ಮುಲ್ ನಿರ್ದೇಶಕ ಹಾಗೂ ಶಾಸಕರಾದ ಹೆಚ್.ಟಿ ಮಂಜು ತಿಳಿಸಿದರು. ತಾಲ್ಲೂಕಿನ ಸಂತೆಬಾಚಹಳ್ಳಿ ಹೋಬಳಿಯ ಲೋಕನಹಳ್ಳಿ ಹಾಲು ಉತ್ಪಾದಕರ ಸಹಕಾರ ಸಂಘದ 2023–24ನೇ ಸಾಲಿನ ಸರ್ವಸದಸ್ಯರ ವಾರ್ಷಿಕ ಮಹಾಸಭೆಯನ್ನು ಉದ್ಘಾಟಿಸಿ ಮಾತನಾಡಿದರು. ಹೈನುಗಾರಿಕೆಯು ದೇಶದಲ್ಲಿ ಬೇರೆಬೇರೆ ಉದ್ಯಮದಂತೆ ದೊಡ್ಡ ಉದ್ಯಮವಾಗಿ ಬೆಳೆಯುತ್ತಿರುವುದು ಸಂತೋಷದ ಸಂಗತಿ,ಇತ್ತೀಚಿನ ದಿನಗಳಲ್ಲಿ ರೈತರು ಕೃಷಿಯ ಜೊತೆಗೆ ಹೈನುಗಾರಿಕೆಯನ್ನು ಹೆಚ್ಚಾಗಿ ಅವಲಂಬಿಸಿದ್ದಾರೆ. ಆದ್ದರಿಂದ ಸಂಘ ಹಾಗೂ ಮಂಡ್ಯ ಜಿಲ್ಲಾ ಹಾಲು ಒಕ್ಕೂಟದಿಂದ ಸಿಗುವ ಸೌಲಭ್ಯಗಳನ್ನು ಸದ್ಬಳಕೆ ಮಾಡಿಕೊಳ್ಳಬೇಕು



ಹಾಗೂ ಸಂಘದಲ್ಲಿ ರಾಜಕಾರಣ ಬೆರಸದೇ ಸಂಘವನ್ನು ಅಭಿವೃದ್ಧಿಯಲ್ಲಿ ಎಲ್ಲರೂ ಪಾತ್ರರಾಗಬೇಕು,ರಾಸುಗಳಿಗೆ ಹಾಗೂ ವೈಯುಕ್ತಿಕವಾಗಿ ವಿಮೆ ಮಾಡಿಸಬೇಕು. ಮನ್ಮುಲ್ ಸವಲತ್ತುಗಳು ಹಾಗೂ ರಾಸುಗಳ ಪೋಷಣೆ,ಗುಣಮಟ್ಟದ ಹಾಲು ಸರಬರಾಜು ಮಾಡುವ ಬಗ್ಗೆ ಸವಿವರವಾಗಿ ತಿಳಿಸಿದರು.ಕಡ್ಡಾಯವಾಗಿ .ಐದು ವರ್ಷದ ಆಡಳಿತ ಮಂಡಳಿಯ ಅವಧಿಯಲ್ಲಿ ಸರ್ವ ಸದಸ್ಯರ ವಾರ್ಷಿಕ ಸಭೆಗೆ ಕನಿಷ್ಠ ಎರಡು ಬಾರಿ ಹಾಜರಾಗಿ ಸಂಘದ ನಡಾವಳಿ ಪುಸ್ತಕಕ್ಕೆ ಸಹಿಯನ್ನು ನಮೂದಿಸಬೇಕು.ಸಂಘದಲ್ಲಿ ಕನಿಷ್ಠ ವ್ಯವಹಾರ ಮಾಡಿದರೆ ಸಂಘದ ಆಡಳಿತ ಮಂಡಳಿಯ ಚುನಾವಣೆಯಲ್ಲಿ ಭಾಗವಹಿಸಬಹುದು ಎಂದು ಹೇಳುವುದರ ಮೂಲಕ ಉತ್ಪಾದಕರ ಜಾಗೃತಿ ಮೂಡಿಸಿದರು. ಸಭೆಯಲ್ಲಿ ಮಾರ್ಗ ವಿಸ್ತರಣಅಧಿಕಾರಿಗಳಾದ ಗುರುರಾಜ್ ಸುರಗ್ಗಿಹಳ್ಳಿ ಈ ವರ್ಷದ ಆಯ್ಯವ್ಯಯ ಮತ್ತು ಮುಂದಿನ ವರ್ಷದ ಬಜೆಟ್‌ನ್ನು ಮಂಡಿಸಿದರು. ಈ ಸಂದರ್ಭದಲ್ಲಿ ಸಂತೆಬಾಚಹಳ್ಳಿ ಹೋಬಳಿಯ ಜೆಡಿಎಸ್ ಅಧ್ಯಕ್ಷ ಸಂತೆಬಾಚಹಳ್ಳಿ ರವಿ ಕುಮಾರ್,ಸಂಘದ ಅಧ್ಯಕ್ಷ ಎಲ್.ಎಸ್ ಗೋವಿಂದೇಗೌಡ ,ಉಪಾಧ್ಯಕ್ಷ ವಿಶ್ವನಾಥ್, ನಿರ್ದೇಶಕರಾದ ನಿಲೇಗೌಡ, ದೇವರಾಜು, ಸುಮಂತ್, ಸುಮ, ಮಂಜುಳಾ, ಜಯಲಕ್ಷ್ಮಮ್ಮ, ಲಕ್ಷ್ಮಮ್ಮ, ಸಂಘದ ಕಾರ್ಯದರ್ಶಿ ಜಿ ಸ್ವಾಮಿ, ಹಾಲು ಪರೀಕ್ಷಕ ರಾಮಕೃಷ್ಣ ಎಲ್.ಎಸ್, ಸಹಾಯಕಿ ರತ್ನಮ್ಮ, ನಾಗರಾಜು, ಶಾಸಕರ ಆಪ್ತ ಸಹಾಯಕ ಅರಳಕುಪ್ಪೆ ಪ್ರತಾಪ್,ಸೇರಿದಂತೆ ಉಪಸ್ಥಿತರಿದ್ದರು.

ಸುದ್ದಿಯೊಂದಿಗೆ ಮನು ಮಾಕವಳ್ಳಿ ಕೆಆರ್‌ಪೇಟೆ

## ಹೊಸನಗರದಲ್ಲಿ ಯಕ್ಷದ್ರುವ ಪಟ್ಲ ಫೌಂಡೇಶನ್ ಟ್ರಸ್ಟ್ ನವರಿಂದ ಉಚಿತ ಯಕ್ಷಗಾನ ತರಬೇತಿ ಕಾರ್ಯಗಾರ ಉದ್ಘಾಟನೆ.....!

ಹೊಸನಗರ : ಮಂಗಳೂರಿನ ಯಕ್ಷದ್ರುವ ಪಟ್ಲ ಫೌಂಡೇಶನ್ ಟ್ರಸ್ಟ್ ನವರ ಯಕ್ಷದ್ರುವ ಯಕ್ಷ ಶಿಕ್ಷಣ ಯೋಜನೆ ಅಡಿಯಲ್ಲಿ ತಾಲೂಕಿನ ಹೊಸನಗರ ನಿಟ್ಟೂರು ಜಯನಗರ ನಗರ ರಿಪ್ಪನ್ ಪೇಟೆ ಸೋನಲೆ ಮಾರಂಬಳ್ಳಿ ಸಂಪೆಕಟ್ಟೆ ಲಿಂಗದಹಳ್ಳಿ ನಿಟ್ಟೂರು ಸಾಗರ ಕೋಡೂರು ಬಟ್ಟೆ ಮಲ್ಲಪ್ಪ ಮೊದಲಾದ 30 ಕಡೆ 24 25 ನೇ ಸಾಲಿನಲ್ಲಿ ನಾಟ್ಯ ತರಬೇತಿ ಶಿಕ್ಷಣ ಅಭಿಯಾನದಡಿ ಉಚಿತ ಯಕ್ಷಗಾನ ತರಬೇತಿ ಕಾರ್ಯಗಾರಕ್ಕೆ ಪಟ್ಟಣದ ಈಡಿಗ ಸಭಾಭವನದಲ್ಲಿ ಪಟ್ಲ ಫೌಂಡೇಶನ್ ಟ್ರಸ್ಟ್ ರಿ ಮಂಗಳೂರು ಸಂಸ್ಥಾಪಕರಾದ




ಯಕ್ಷಗಾನದ ಮೇರು ಕಲಾವಿದ ಪಟ್ಲ ಸತೀಶ ಶೆಟ್ಟಿ ರವರ ಅಧ್ಯಕ್ಷತೆಯಲ್ಲಿ ಸಾಗರ ಕ್ಷೇತ್ರದ ಶಾಸಕ ಹಾಗೂ ಅರಣ್ಯ ಮತ್ತು ಕೈಗಾರಿಕಾ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಬೇಳೂರು ಗೋಪಾಲಕೃಷ್ಣರವರು ಚಂಡೆ ಬಾರಿಸುವುದರ ಮೂಲಕ ಉದ್ಘಾಟಿಸಿದರು.

ಶಾಸಕರು ಮಾಜಿ ಗೃಹ ಸಚಿವರಾದ ಆರಗ ಜ್ಞಾನೇಂದ್ರರವರು ಯಕ್ಷಗಾನ ತರಬೇತಿ ಕಾರ್ಯಗಾರವನ್ನು ಮದ್ದಲೆ ಬಾರಿಸುವ ಮೂಲಕ ಉದ್ಘಾಟಿಸಿದರು.

ಈ ಸಮಾರಂಭದಲ್ಲಿ ಶಿವಮೊಗ್ಗ ಜಿಲ್ಲಾ ನಾಟ್ಯ ತರಬೇತಿ ಶಿಕ್ಷಣದ ಅಭಿಯಾನದ ಸಂಚಾಲಕ ಹಾಗೂ ಮಲೆನಾಡು ವಾಯ್ಸ್ ಪತ್ರಿಕೆ ಸಂಪಾದಕರಾದ ನಗರ ರಾಘವೇಂದ್ರ ಯಕ್ಷದ್ರುವ ಯಕ್ಷ ಶಿಕ್ಷಣ ಪ್ರಧಾನ ಸಂಚಾಲಕರಾದ ಪಣಂಬೂರು ವಾಸುದೇವ ಐತಾಳ್ ನಗರ ವಿದ್ಯಾ ಸಂಸ್ಥೆಯ ಅಧ್ಯಕ್ಷ ಕೆ ವಿ ಕೃಷ್ಣಮೂರ್ತಿ ಖ್ಯಾತ ಅರ್ಥದಾರಿಗಳಾದ ಡಾ. ಶಾಂತರಾಮ ಪ್ರಭು ರಾಮಕೃಷ್ಣ ವಿದ್ಯಾಲಯದ ಸಂಸ್ಥಾಪಕ ಡಿ ಎಂ ದೇವರಾಜ್ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಬಿಜಿ ಚಂದ್ರಮೌಳಿ ಕೊಡಚಾದ್ರಿ ಪ್ರಥಮ ದರ್ಜೆ ಕಾಲೇಜು ಅಭಿವೃದ್ಧಿ ಸಮಿತಿ ಉಪಾಧ್ಯಕ್ಷ ಮಾಸ್ತಿಕಟ್ಟೆ ಸುಬ್ರಹ್ಮಣ್ಯ ಮೊದಲಾದವರು ಉಚಿತ ಯಕ್ಷಗಾನ ಶಿಕ್ಷಣದ ಉದ್ಘಾಟನಾ ಸಮಾರಂಭದಲ್ಲಿ ಪಾಲ್ಗೊಂಡು ಮಾತನಾಡಿ ಶಿಕ್ಷಣ ಕ್ಷೇತ್ರದಲ್ಲಿ ಯಕ್ಷಗಾನ ಕಲೆಗೆ ಆದ್ಯತೆ ಪ್ರೋತ್ಸಾಹ ನೀಡಬೇಕೆಂದು ಆಶಿಸಿದರು.

ಕುಬೇಂದ್ರಪ್ಪ ಸ್ವಾಗತಿಸಿದರು ನಗರ ರಾಘವೇಂದ್ರ ಪ್ರಾಸ್ತಾವಿಕ ನುಡಿ ನುಡಿದರು ಅಶ್ವಿನಿ ಪಂಡಿತ್ ಕಾರ್ಯಕ್ರಮ ನಿರೂಪಿಸಿದರು.

ಸಮಾರಂಭದಲ್ಲಿ ಪಟ್ಟಣದ ವಿವಿಧ ಶಾಲೆಗಳ ಐದು ನೂರಕ್ಕೂ ಹೆಚ್ಚು ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು...

ವರದಿ: ತನುಜ್ ಕುಮಾರ್ ಹೊಸನಗರ...

## ಗಿಡ ಗೆಡ್ಡೆಗಳಿಂದ ಅವ್ಯವಸ್ಥೆಯ ತಾಣಗಳಾಗಿದೆ



ಕೆ.ಆರ್.ಪೇಟೆ: ಸಾರ್ವಜನಿಕರಿಗೆ ಸದ್ಬಳಕೆ ಆಗಬೇಕಿದ್ದ ಬಹುಕೋಟಿಯ ಒಳಾಂಗಣ ಕ್ರೀಡಾಂಗಣ ನಿಮ್ಮ ಬೇಜವಾಬ್ದಾರಿತನದಿಂದ ಗಿಡ ಗೆಡ್ಡೆಗಳಿಂದ ಅವ್ಯವಸ್ಥೆಯ ತಾಣಗಳಾಗಿದೆ ಎಂದು ಯುವಜನ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಜಿಲ್ಲಾ ಸಹಾಯಕ ನಿರ್ದೇಶಕ ಓಂಪ್ರಕಾಶ್ ಮತ್ತು ನಿರ್ವಹಣೆ ಗುತ್ತಿಗೆದಾರ ಮಧುಗೆ ಶಾಸಕ ಹೆಚ್.ಟಿ ಮಂಜು ತೀವ್ರ ತರಾಟೆಗೆ ತೆಗೆದುಕೊಂಡರು

ಪಟ್ಟಣದಲ್ಲಿರುವ ಶ್ರೀ ನಾಲ್ವಡಿ ಕೃಷ್ಣರಾಜ ಒಡೆಯರ ಕ್ರೀಡಾಂಗಣದಲ್ಲಿ ನಿರ್ಮಾಣಗೊಂಡಿರುವ ಶ್ರೀ ಶ್ರೀ ಶ್ರೀ ಬಾಲಗಂಗಾಧರನಾಥ ಮಹಾಸ್ವಾಮೀಜಿ ಒಳಾಂಗಣ ಕ್ರೀಡಾಂಗಣ ಸಂಪೂರ್ಣ ನಿರ್ವಹಣೆ ಇಲ್ಲದೆ ಅವ್ಯವಸ್ಥೆ ಮತ್ತು ಅಕ್ರಮ ಚಟುವಟಿಕೆಗಳ ತಾಣವಾಗಿದೆ ಎಂದು ಸಾರ್ವಜನಿಕರ ದೂರಿನ ಮೇರೆಗೆ ಇಂದು ಸ್ಥಳಕ್ಕೆ ದಿಡೀರ್ ಭೇಟಿ ನೀಡಿ ಸ್ಥಳ ಪರಿಶೀಲಿಸಿ ಮಾತನಾಡಿದರು. ಸಾರ್ವಜನಿಕರಿಗೆ ಸದ್ಬಳಿಕೆ ಆಗಬೇಕೆಂಬ ನಿಟ್ಟಿನಲ್ಲಿ ಸರ್ಕಾರ ಬಹುಕೋಟಿ ವೆಚ್ಚದಲ್ಲಿ ಒಳಾಂಗಡ ಕ್ರೀಡಾಂಗಣ ನಿರ್ಮಿಸಿ ಕೆಲವೇ ವರ್ಷಗಳಲ್ಲಿ ಸಾರ್ವಜನಿಕರ ನಡೆದಾಡುವ ಜಾಗದಲ್ಲಿ ಗಿಡ ಗೆಡ್ಡೆಗಳು ಬೆಳೆದು ವಿಷ ಜಂತುಗಳ ತಾಣವಾಗಿದೆ.ಎಲ್ಲಂದರಲ್ಲಿ ಕಸಕಡ್ಡಿಗಳ ರಾರಾಜಿಸುತ್ತಿವೆ. ಆವರಣಕ್ಕೆ ಬರುವ ಸಾರ್ವಜನಿಕರಿಗೆ ಸದ್ಬಳಿಕೆ ಆಗಬೇಕಿದ್ದ ಶೌಚಾಲಯ ಗಬ್ಬೆದ್ದನಾರುತಿದೆ ಎಲ್ಲಾ ಅವ್ಯವಸ್ಥೆಯು ಕಂಡರೂ ಕಾಣದಂತೆ ಕುಳಿತಿರುವುದು ನಿಜಕ್ಕೂ ನಿಮ್ಮ ಬೇಜವಾಬ್ದಾರಿತನದ ಜೊತೆಗೆ ಸಾರ್ವಜನಿಕರು ಸ್ಥಳೀಯ ಶಾಸಕರ ಕಾರ್ಯವೈಕರಿ ಶೂನ್ಯ ಎಂದುಕೊಳ್ಳಲಿ ಎನ್ನುವ ಮನೋಭಾವನೆಯಲ್ಲಿ ಕಾರ್ಯನಿರ್ವಹಿಸುತಿದ್ದೀರಾ.....? ಎಂದು ಯುವಜನ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಜಿಲ್ಲಾ ಸಹಾಯಕ ನಿರ್ದೇಶಕ ಓಂಪ್ರಕಾಶ್ ತರಾಟೆಗೆ ತೆಗೆದುಕೊಂಡರು.. ಆದರೆ ಅದಕ್ಕೆ ನನ್ನ ಕ್ಷೇತ್ರದಲ್ಲಿ ಅವಕಾಶವಿಲ್ಲ ಸಾರ್ವಜನಿಕರಿಗೆ ಸದ್ಬಳಿಕೆ ಆಗುವ ರೀತಿಯಲ್ಲಿ ಕಾರ್ಯನಿರ್ವಹಿಸಬೇಕು ಇಲ್ಲದಿದ್ದರೆ ಮುಲಾಜಿಲ್ಲದೆ ನಿರ್ವಹಣೆ ಗುತ್ತಿಗೆದಾರನ ವಿರುದ್ಧ ಶಿಸ್ತು ಕ್ರಮ ಜರುಗಿಸುತ್ತೇವೆ ಎಂದು ನಿರ್ವಹಣೆ ಗುತ್ತಿಗೆದಾರ ಮಧುಗೆ ಶಾಸಕ ಹೆಚ್. ಟಿ ಮಂಜು ಎಚ್ಚರಿಕೆ ನೀಡಿದರು.

ಈ ಸಂದರ್ಭದಲ್ಲಿ ತಾ.ಪಂ ಮಾಜಿ ಸದಸ್ಯ ಹುಲ್ಲೆಗೌಡ, ನಿರಮಿತಿ ಕೇಂದ್ರದ ಇಂಜಿನಿಯರ್ ಹೇಮಂತ್ ಕುಮಾರ್, ಶಾಸಕರ ಆಪ್ತ ಸಹಾಯಕ ಅರಳಕುಪ್ಪೆ ಪ್ರತಾಪ್, ಸೇರಿದಂತೆ ಉಪಸ್ಥಿತರಿದ್ದರು.

– ಸುದ್ದಿಯೊಂದಿಗೆ ಮನು ಮಾಕವಳ್ಳಿ ಕೆಆರ್‌ಪೇಟೆ

## ಅಮಾಯಕ ವಿದ್ಯಾರ್ಥಿಗಳು ಅಪಘಾತದಲ್ಲಿ ಬಲಿಯಾಗುತ್ತಿದ್ದಾರೆ




ಸಾಗರ ಪಟ್ಟಣದ ಎಲ್ಲ ಪದವಿ ಕಾಲೇಜುಗಳ ಎದುರಿನಲ್ಲಿ ರಾಷ್ಟ್ರೀಯ ಹೆದ್ದಾರಿ ಹಾದು ಹೋಗಿದ್ದರೂ, ಸಂಬಂಧಪಟ್ಟ ಅಧಿಕಾರಿಗಳು ರಸ್ತೆ ಅಗಲೀಕರಣದ ಸಂದರ್ಭದಲ್ಲಿ ಯಾವುದೇ ಸೂಕ್ತ ಸುರಕ್ಷತಾ ಕ್ರಮಗಳನ್ನು ತೆಗೆದುಕೊಳ್ಳದಿರುವ ಹಿನ್ನೆಲೆಯಲ್ಲಿ ಅಮಾಯಕ ವಿದ್ಯಾರ್ಥಿಗಳು ಅಪಘಾತದಲ್ಲಿ ಬಲಿಯಾಗುತ್ತಿದ್ದಾರೆ. ಕೂಡಲೇ ವಿದ್ಯಾರ್ಥಿಗಳ ಸುರಕ್ಷತೆಗಾಗಿ ಕಾಲೇಜು ಮುಂಭಾಗದ ರಾಷ್ಟ್ರೀಯ ಹೆದ್ದಾರಿಯಲ್ಲಿ ಝೀಬ್ರಾ ಕ್ರಾಸಿಂಗ್, ವೇಗ ನಿಯಂತ್ರಕ, ಸೂಚನಾ ಫಲಕಗಳನ್ನು ಅಳವಡಿಸಬೇಕು ಎಂದು ಆಗ್ರಹಿಸಿ ಬುಧವಾರ ಉಪವಿಭಾಗಾಧಿಕಾರಿ ಕಚೇರಿ ಎದುರು ವಿದ್ಯಾರ್ಥಿಗಳು ಪ್ರತಿಭಟನೆ ನಡೆಸಿ ಮನವಿ ಸಲ್ಲಿಸಿದರು.

ಪಟ್ಟಣದ ಇಂದಿರಾಗಾಂಧಿ ಮಹಿಳಾ ಪ್ರಥಮ ದರ್ಜೆ ಕಾಲೇಜು, ಜೋಗ ರಸ್ತೆಯಲ್ಲಿರುವ ಎಲ್‌ಬಿ ಕಾಲೇಜು, ಹಾಗೂ ಶಿವಮೊಗ್ಗ ರಸ್ತೆಯಲ್ಲಿರುವ ಸರಕಾರಿ ಪ್ರಥಮ ದರ್ಜೆ ಕಾಲೇಜು ವಿದ್ಯಾರ್ಥಿಗಳು ನಗರದಲ್ಲಿ ಮೌನ ಜಾಥಾ ನಡೆಸಿ, ಉಪವಿಭಾಗಾಧಿ ಕಾರಿಗಳ ಮೂಲಕ ಶಾಸಕರು, ಜಿಲ್ಲಾ ಉಸ್ತುವಾರಿ ಸಚಿವರು, ಸಂಸದರು, ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಅಧಿಕಾರಿಗಳಿಗೆ ಮನವಿ ಸಲ್ಲಿಸಿದರು.

ಸಂಬಂಧಪಟ್ಟ ಅಧಿಕಾರಿಗಳು ತಕ್ಷಣ ಕಾಲೇಜು ಇರುವ ಪ್ರದೇಶದಲ್ಲಿ ರಾಷ್ಟ್ರೀಯ ಹೆದ್ದಾರಿಗೆ ಜೀಬ್ರಾ ಕ್ರಾಸಿಂಗ್, ಸೂಚನಾ ಫಲಕ, ವೇಗನಿಯಂತ್ರಕ ಅಳವಡಿಕೆ, ಕಾಲೇಜಿನ ಮುಂಭಾಗದಲ್ಲಿ ಬಸ್ ನಿಲ್ದಾಣದ ವ್ಯವಸ್ಥೆ ಕಲ್ಪಿಸಬೇಕೆಂದು ಅವರು ಆಗ್ರಹಿಸಿದರು. ಈ ವೇಳೆ ಮಾತನಾಡಿದ ವಿದ್ಯಾರ್ಥಿ ಪ್ರಮುಖರು, ರಸ್ತೆ ನಿರ್ಮಾಣದ ವೇಳೆಯಲ್ಲಿ ಆಗಿರುವ ಅಚಾತುರ್ಯ ದಿಂದ ವಿದ್ಯಾರ್ಥಿನಿ ಮೃತಪಟ್ಟಿದ್ದಾಳೆ. ಇಂಥ ಘಟನೆ ಮರುಕಳಿಸಬಾರದು. ಅವೈಜ್ಞಾನಿಕ ಕಾಮಗಾರಿ ನಡೆಸಿ, ಸುರಕ್ಷತಾ ಕ್ರಮಗಳನ್ನು ತೆಗೆದುಕೊಳ್ಳದ ಅಧಿಕಾರಿಗಳ ವಿರುದ್ಧದ ಹೋರಾಟ ನಡೆಯುತ್ತದೆ. ಸರಕಾರ, ಜನಪ್ರತಿನಿಧಿಗಳನ್ನು ಎಚ್ಚರಿಸುವ, ಮಕ್ಕಳು ಸುರಕ್ಷಿತವಾಗಿ ಕಾಲೇಜಿಗೆ ಬಂದು ಹೋಗಲು ಅನುಕೂಲ ಕಲ್ಪಿಸುವ ಉದ್ದೇಶದಿಂದ ಈ ಪ್ರತಿಭಟನೆ ನಡೆಸುತ್ತಿದ್ದೇವೆ ಎಂದರು. ಮನವಿ ಸ್ವೀಕರಿಸಿ ಮಾತನಾಡಿದ ಉಪವಿಭಾಗಾಧಿಕಾರಿ ಆರ್. ಯತೀಶ್, ಸಂಬಂಧ ಪಟ್ಟ ಇಲಾಖೆಗಳ ಅಧಿಕಾರಿಗಳನ್ನೂ, ಉಪವಿಭಾಗಾದಿ, ಕಾರಿ ಕಚೇರಿಗೆ ಕರೆಸಿ ಸಭೆ ನಡೆಸಿ ಕ್ರಮ ತೆಗೆದುಕೊಳ್ಳುವ ಭರವಸೆ ನೀಡಿದರು. ವಿವಿಧ ಕಾಲೇಜುಗಳ ವಿದ್ಯಾರ್ಥಿಗಳಾದ ರಾಹುಲ್, ಸಚಿನ್, ಭುವನ ಎಸ್. ಜಿ. ಅನಿಕೇಟ್, ಮಾನಸ, ವೈಷ್ಣವಿ, ಉನ್ನತಿ ಮೊದಲಾದವರು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

ಕಳೆದ ಒಂದು ವರ್ಷಕ್ಕೂ ಹೆಚ್ಚು ಕಾಲದಿಂದ ಸಾಗರ ಪಟ್ಟಣದಲ್ಲಿ ರಾಷ್ಟ್ರೀಯ ಹೆದ್ದಾರಿ ಅಗಲೀಕರ ಕಾಮಗಾರಿ ನಡೆಯುತ್ತಿದೆ. ಈ ರಸ್ತೆಯಲ್ಲೇ ಬರುವ ಸರಕಾರಿ ಪ್ರಥಮದರ್ಜೆ ಕಾಲೇಜು, ಇಂದಿರಾ ಗಾಂಧಿ ಮಹಿಳಾ ಕಾಲೇಜು, ಪದವಿ ಪೂರ್ವ ಕಾಲೇಜು ಹಾಗೂ ಎಲ್.ಬಿ. ಕಾಲೇಜುಗಳ ಮುಂಭಾಗದ ರಸ್ತೆಯಲ್ಲಿ ಯಾವುದೇ ಸುರಕ್ಷತಾ ಕ್ರಮಗಳನ್ನು ತೆಗೆದುಕೊಂಡಿಲ್ಲ. ಇದರಿಂದ ವಿದ್ಯಾರ್ಥಿಗಳಿಗೆ ನಿತ್ಯವೂ ರಸ್ತೆ ದಾಟಲು ತೊಂದರೆಯಾಗುತ್ತಿದೆ. ಜೂ. 22ರಂದು ಎಲ್‌ಬಿ ಕಾಲೇಜು ಎದುರಿನಲ್ಲಿ ನಡೆದ ಅಪಘಾತದಲ್ಲಿ ವಿದ್ಯಾರ್ಥಿನಿ ಮೃತಪಟ್ಟಿದ್ದಳು. ಕಳೆದ ವರ್ಷ ಹಾಸ್ಟೆಲ್ ವಿದ್ಯಾರ್ಥಿನಿ ಸಾವಿಗೀಡಾಗಿದ್ದಳು. ಇಂದಿರಾಗಾಂಧಿ ಕಾಲೇಜಿನ ವಿದ್ಯಾರ್ಥಿನಿಯರಿಗೆ ವೇಗವಾಗಿ ಬಂದ ಆಟೋ ಡಿಕ್ಕಿಹೊಡೆದ ಪ್ರಕರಣವೂ ನಡೆದಿತ್ತು.

## ಪ್ರತಿಭಟನೆ ನಡೆಸಲು ಅನುಮತಿ ನೀಡುವಂತೆ ದಸಂಸ ವತಿಯಿಂದ ಮನವಿ



ಮಾಲೂರು: ಪಟ್ಟಣದ ಪಶು ಸಂಗೋಪನಾ ಕಛೇರಿ ಮುಂಭಾಗ ಪ್ರತಿಭಟನೆ ನಡೆಸಲು ಅನುಮತಿ ನೀಡುವಂತೆ ದಸಂಸ ತಾಲ್ಲೂಕು ಸಂಚಾಲಕ ಎಸ್.ಎಂ.ವೆಂಕಟೇಶ್ ನೇತೃತ್ವದಲ್ಲಿ ತಹಶೀಲ್ದಾರ್ ಕೆ.ರಮೇಶ್ ಅವರಿಗೆ ಮನವಿ ಸಲ್ಲಿಸಿದರು. ತಾಲ್ಲೂಕು ಪಶು ಸಂಗೋಪನಾ ಇಲಾಖೆ ಆಸ್ಪತ್ರೆ ಮತ್ತು ಅದರ ಅಡಿಯಲ್ಲಿ ಬರುವ ಆಸ್ಪತ್ರೆಗಳಲ್ಲಿ ಸಮರ್ಥಕವಾದ ಪಶು ವೈದ್ಯಾಧಿಕಾರಿಗಳು ಇಲ್ಲದೆ ಹೈನುಗಾರಿಕೆಯನ್ನು ನಂಬಿ ಜೀವನ ಮಾಡುತ್ತಿರುವ ರೈತರಿಗೆ ಅನಾನುಕೂಲವಾಗಿದ್ದು, ಹಾಲಿ ಇರುವ ಸಹಾಯಕ ನಿರ್ದೇಶಕರು ಸರಿಯಾದ ರೀತಿಯಲ್ಲಿ ಕಛೇರಿಗೆ ಬರದೆ ರೈತರಿಗೆ ಸಂಕಷ್ಟ ಎದುರಾಗಿದ್ದು, ಕುರಿ ಸಾಗಾಣಿಕೆ, ಕೋಳಿ ಸಾಗಾಣಿಕೆ, ಹಸು ಸಾಗಾಣಿಕೆ ಸಾಕಷ್ಟು ರೋಗ ಹರಡುತ್ತಿದ್ದು, ಚಿಕಿತ್ಸೆಗೆ ತೊಂದರೆ ಹಿನ್ನೆಯಲ್ಲಿ ಹಾಲಿ ಪ್ರಭಾರ ಸಹಾಯಕ ನಿರ್ದೇಶ್ಕರನ್ನು ಬೇರೆಡೆ ವರ್ಗಾವಣೆ ಮಾಡಬೇಕು.ಎಲ್ಲಾ ವೈದ್ಯಕಿಯ ಆಸ್ಪತ್ರೆಗಳಿಗೆ ವೈದ್ಯಾಧಿಕಾರಿಯನ್ನು ನೇಮಕಾತಿ ಮಾಡಬೇಕೆಂದು ಒತ್ತಾಯಿಸಿ ದಿ.02–07–2024 ರ ಮಂಗಳವಾರ ಸಮಯ 11:00 ಗಂಟೆಗೆ ತಾಲ್ಲೂಕು ಪಶು ಆಸ್ಪತ್ರೆ ಕಛೇರಿಯ ಮುಂಭಾಗ ನೂರಾರು ರೈತರು ಪ್ರತಿಭಟನೆ ಹಮ್ಮಿಕೊಂಡಿದ್ದು, ಪ್ರತಿಭಟನೆಗೆ ಅನುಮತಿ ನೀಡಬೇಕೆಂದು ಮನವಿ ಸಲ್ಲಿಸಿದರು. ಈ ಸಂದರ್ಭದಲ್ಲಿ ದಸಂಸ ಪ್ರೊ.ಕೃಷ್ಣಪ್ಪ ಬಣದ ಜಿಲ್ಲಾ ಸಂಘಟನಾ ಸಂಚಾಲಕ ಚವ್ವೇನಹಳ್ಳಿ ವಿಜಿ, ಪ್ರಗತಿಪರ ರೈತ ಮುಖಂಡ ನೀಲಕಂಠ ಅಗ್ರಹಾರ ಶ್ಯಾಮಣ್ಣ, ಸೇರಿದಂತೆ ರೈತ ಮುಖಂಡರು ಹಾಜರಿದ್ದರು.

ವರದಿ: ಗೋಪಾಲಕೃಷ್ಣ, ಕೋಲಾರ

## ಪೂರ್ವಾನುಮತಿ ಪಡೆಯದೆ ಮಂಗನನ್ನು ಹಿಡಿದು ಸಾಗಾಟಕ್ಕೆ ಯತ್ನಿಸಿದ್ದ ಘಟನೆ

ಸಾಗರ ತಾಲೂಕಿನ ಎಡಜಿಗಳೇ ಮನೆ ಗ್ರಾಮ ಪಂಚಾಯತಿ ವ್ಯಾಪ್ತಿಯ ಬಾಳೆಹಳ್ಳಿ ಗ್ರಾಮದಲ್ಲಿ ಯಾವುದೇ ಪೂರ್ವಾನುಮತಿ ಪಡೆಯದೆ ಮಂಗನನ್ನು ಹಿಡಿದು ಸಾಗಾಟಕ್ಕೆ ಯತ್ನಿಸಿದ್ದ ಘಟನೆ ನಡೆದಿದ್ದು, ಗ್ರಾಮಸ್ಥರು ನೀಡಿದ ದೂರಿನ ಅನ್ವಯ ಡಿಎಫ್‌ಓ ಸಂತೋಷ್ ಕುಮಾರ್ ನೇತೃತ್ವದಲ್ಲಿ ಅಧಿಕಾರಿಗಳು ಸ್ಥಳಕ್ಕೆ ಧಾವಿಸಿ ಕಬ್ಬಿಣದ ಬೋನುಗಳಲ್ಲಿ ಹಿಡಿದಿಟ್ಟಿದ್ದ 32ಕ್ಕು ಹೆಚ್ಚು ಮಂಗಗಳನ್ನು ಸೋಮವಾರ ರಕ್ಷಿಸಿದ್ದಾರೆ. ಘಟನೆ ಸಂಬಂಧ ಬಾಳೆಹಳ್ಳಿ ಗ್ರಾಮದಲ್ಲಿ ಮಂಗ ಹಿಡಿಯುತ್ತಿದ್ದ ಶಿವಮೊಗ್ಗದ ಗಾಡಿಕೊಪ್ಪ ನಿವಾಸಿಗಳಾದ 5 ಜನರನ್ನು (ಇಬ್ಬರು ಪುರುಷರು ಮೂವರು ಮಹಿಳೆಯರು) ವಶಕ್ಕೆ ತೆಗೆದುಕೊಂಡು, ವನ್ಯ ಜೀವಿ ಸಂರಕ್ಷಣಾ ಕಾಯ್ದೆ ಶೆಡ್ಯೂಲ್ 1 ಅನುಭಂದ.. ಪ್ರಕರಣ ಸಂಖ್ಯೆ 31/2024/2025 ಅಡಿ ಪ್ರಕರಣ ದಾಖಲಾಗಿದೆ... ಇನ್ನು ಈ ಘಟನೆಗೆ ಸಂಬಂಧಿಸಿದಂತೆ ಉಳಿದ ಆರೋಪಿಗಳ ಪತ್ತೆ ಗಾಗಿ ವಿಶೇಷ ತಂಡ ಮಾಡಿ ಶೋಧ ಕಾರ್ಯ ನಡೆಯುತ್ತಿದೆ.

ಈ ಕಾರ್ಯಾಚರಣೆಯನ್ನು ಡಿ.ಎಫ್.ಓ ಅವರ ನಿರ್ದೇಶನದಂತೆ ನಡೆದಿದ್ದು ವಲಯ ಅರಣ್ಯ ಅಧಿಕಾರಿ ಅರವಿಂದ ಅವರ ನೇತ್ರತ್ವದಲ್ಲಿ .ಶಿವಕುಮಾರ್. ಕಿರಣ್.ಸುಂದರ್ ಮೂರ್ತಿ. ಅಶೋಕ್ .ಅಣ್ಣಪ್ಪ ಸುರೇಶ್ ವಾಹಮ ಚಾಲಕ ರಾಘವೇಂದ್ರ ಶ್ರೀಮತಿ ಅಮಿತ್ ಶಿವರಾಜ್ ಇನ್ನಿತರು ಪಾಲ್ಗೊಂಡಿದ್ದರು... ಬಾಳೆಹಳ್ಳಿಯಲ್ಲಿ



ಶೂಲಿನಿ ದೇವಸ್ಥಾನದ ಎದುರು ಕಳೆದ ವಾರ ಶಾಸಕ ಗೋಪಾಲಕೃಷ್ಣ ಬೇಳೂರು, ಅರಣ್ಯ ಇಲಾಖೆ ಸೇರಿದಂತೆ ಒಂದಷ್ಟು ಸಂಘಟನೆಗಳ ನೇತೃತ್ವದಲ್ಲಿ ವನಮಹೋತ್ಸವ ನಡೆಸಿದ್ದರು. ಅಲ್ಲಿ ಸೊಪ್ಪಿನ ಬೆಟ್ಟ ಉಳಿಸುವ ಕುರಿತು ಎಲ್ಲರೂ ಬಾಯಿತುಂಬಾ ಕತೆ ಹೇಳಿದ್ದರು. ಅದಾದ ಮೂರು ದಿನಕ್ಕೆಲ್ಲ ಇದೆ ದೇವಸ್ಥಾನದ ಎದುರಿನ ಸೊಪ್ಪಿನ ಬೆಟ್ಟದಲ್ಲಿ ಹಕ್ಕಿಪಿಕ್ಕಿ ಜನಾಂಗದವರು ಟೆಂಟ್ ಹಾಕಿದ್ದರು. ಇದು ಸ್ಥಳೀಯ ಪಂಚಾಯತಿ ಹಾಗೂ ಅರಣ್ಯ ಇಲಾಖೆ ಗಸ್ತು ಪಾಲಕರ ಗಮನಕ್ಕೂ ಬಂದಿರಲಿಲ್ಲವೇ? ಅಥವಾ ಗೊತ್ತಿದ್ದೂ ಎಲ್ಲದಕ್ಕೂ ಸಮ್ಮತಿಸಿದ್ದರೆ! ಪಂಚಾಯತಿ ಸದಸ್ಯರು, ಅಧ್ಯಕ್ಷರು, ಪಿಡಿಓ ಮೂರ್ನಾಲ್ಕು ದಿನದಿಂದ ಮಂಗ ಹಿಡಿಯುವ ಕಾರ್ಯಕ್ಕೆ ಪೂರ್ವ ತಯಾರಿ ನಡೆಯುತ್ತಿದ್ದರೂ ಮೌನವಾಗಿ ಸಮ್ಮತಿಸಿದ್ದು ಯಾಕೆ ಎಂಬ ಪ್ರಶ್ನೆ ಉದ್ಭವಿಸಿದೆ. ಗ್ರಾಮಸ್ಥರು, ಮಹಿಳೆಯರು ಬೆಟ್ಟದಲ್ಲಿ ಸೊಪ್ಪಿನ ಬೆಟ್ಟದಲ್ಲಿ ಕಟ್ಟಿಗೆ ಕಡಿಯಲು ಹೋದವರನ್ನು ತಡೆದು ಕತ್ತಿ ಕಸಿದುಕೊಂಡು ಬೈದು ಕಳುಹಿಸುವ ಅರಣ್ಯ ಇಲಾಖೆ ಸಿಬ್ಬಂದಿಗೆ 2 ದಿನದಿಂದ ಮಂಗ ಹಿಡಿಯುವ ಕಾರ್ಯಾಚರಣೆ ನಡೆಯುತ್ತಿದ್ದರೂ ಗೊತ್ತಾಗಿಲ್ಲವೇ? ಸ್ಥಳೀಯರು ಅಧಿಕಾರಿಗಳನ್ನು ವಿಚಾರಿಸಿದರೆ ತಮಗೇನು ಗೊತ್ತಿಲ್ಲ ಎಂದು ಮುಸುಮುಸು ನಗುತ್ತಾರೆ... ಇದೆಂಥ ಬೇಜವಾಬ್ದಾರಿ ನಡವಳಿಕೆ!!! ಹಾಗಿದ್ದರೆ ಮಲೆನಾಡಿನ ಕಾಡಿನಲ್ಲಿ ರಾತ್ರೋರಾತ್ರಿ ಮರ ಕಳ್ಳಸಾಗಾಣಿಕೆ ನಡೆಯುವುದೂ ತಮ್ಮ ಗಮನಕ್ಕೆ ಬಂದಿಲ್ಲ ಎಂದು ಸುಮ್ಮನೆ ಕುಳಿತುಕೊಳ್ಳುತ್ತಾರಾ ಅರಣ್ಯ ಇಲಾಖೆ ಸಿಬ್ಬಂದಿಗಳು? ಘಟನೆ ಹಿಂದೆ ಕಾಣದ ಕೈಗಳು ಕೆಲಸ ಮಾಡುತ್ತಿವೆಯಾ ಎಂಬ ಅನುಮಾನ ಹೊಗೆಯಾಡುತ್ತಿದೆ. ಬ್ರಾಹ್ಮಣ ಸಮುದಾಯದ ಕೆಲವರನ್ನು ಬಂಧಿಸುತ್ತಿದ್ದಂತೆ ಅಧಿಕಾರಿಗಳ ಮೇಲೆಯೂ ಒತ್ತಡ ಹೇರಲಾಯಿತಾ? ಎರಡು ದಿನದಿಂದ ಮಂಗ ಹಿಡಿಯುವ ಕೆಲಸ ನಡೆಯುತ್ತಿದ್ದು, ಸೋಮವಾರ ಸಂಜೆ 4–30 ರ ಸಮಯದಲ್ಲಿ ಗ್ರಾಮಸ್ಥರು ಪತ್ರಿಕೆಗಳಿಗೆ ಮಾಹಿತಿ ನೀಡುವ ವರೆಗೂ ಯಾರಿಗೂ ಇದು ತಿಳಿದಿರಲಿಲ್ಲವಾ?

Printed by : H.L.AMARANATH, Owned by: H.L.AMARANATH, Printed at : SREE MANJUNATHA ENTERPRISES No. 7, Tirugappa lane, Cottonpet cross, Cottonpet, Bangalore-560053.
Published at : No.97, 2nd Cross, Vivekanandanagar, Khadi Commission Layout, BSK 3rd Stage, Kathariguppe Main Road, Bengaluru-560085. Mobile: 9663122276 Editor : H.L.AMARANATH